ಸಂಪುಟ : 11 ಸಂಚಿಕೆ: 83 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 01 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 83 Pages : 4+2 Price : 3.00 Friday May 1 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆ

■ವಿಜಯಸಾಕ್ಷಿ ಸುದ್ದಿ, ರೋಣ

ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯನ್ನು ಮೇ 2ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಆರ್.ಎಸ್. ಪಾಟೀಲ ಜಿನ್ನಿಂಗ್ ಫ್ಯಾಕ್ಟರಿಯಲ್ಲಿರುವ ಪಕ್ಷದ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯಲ್ಲಿ ರಾಜ್ಯ ಕಾರ್ಯದರ್ಶಿ ಅಕ್ಷಯ ಪಾಟೀಲ ಹಾಗೂ ಜಿಲ್ಲಾ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಉಪಸ್ಥಿತರಿರುವರು.

ಈ ಹಿನ್ನೆಲೆಯಲ್ಲಿ ಯುವ ಕಾಂಗ್ರೆಸ್ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ರೋಣ ವಿಧಾನಸಭೆ ಕ್ಷೇತ್ರದ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಮುತ್ತುರಾಜ ನವಲಗುಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹೊಸ ಪಾಸ್‌ಪೋರ್ಟ್, ನವೀಕರಣ ಸೇರಿದಂತೆ ವಿವಿಧ ಸೇವೆಗಳು ಒಂದೇ ಕಡೆ**

## ಗದಗ ಸಿಟಿ ಪಾಸ್‌ಪೋರ್ಟ್ ಸೇವಾ ಕೇಂದ್ರದ ಸೌಲಭ್ಯಗಳನ್ನು ಬಳಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಸಿಟಿ ಅಂಚೆ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪಾಸ್‌ಪೋರ್ಟ್ ಸೇವಾ ಕೇಂದ್ರದ (POPSK) ವಿವಿಧ ಸೌಲಭ್ಯಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕರಾದ ಎಸ್.ಎಸ್. ಶಿರಹಟ್ಟಿ ತಿಳಿಸಿದ್ದಾರೆ.

ಗದಗ ಸಿಟಿ ಅಂಚೆ ಕಚೇರಿಯಲ್ಲಿರುವ ಪಾಸ್‌ಪೋರ್ಟ್ ಸೇವಾ ಕೇಂದ್ರದಲ್ಲಿ ನಾಗರಿಕರಿಗೆ ಪಾಸ್‌ಪೋರ್ಟ್ ಸಂಬಂಧಿತ ಸೇವೆಗಳು ಒಂದೇ ಸ್ಥಳದಲ್ಲಿ ಸುಲಭವಾಗಿ ಲಭ್ಯವಿವೆ. ಈ ಕೇಂದ್ರದಲ್ಲಿ ಹೊಸ ಪಾಸ್‌ಪೋರ್ಟ್ ಅರ್ಜಿ ಸಲ್ಲಿಕೆ, ಪಾಸ್‌ಪೋರ್ಟ್ ನವೀಕರಣ/ಮರುಜಾರಿ, ಹೆಸರು ವಿಳಾಸ ಜನ್ಮ ದಿನಾಂಕ ತಿದ್ದುಪಡಿ, ಕಳೆದುಹೋದ ಅಥವಾ ಹಾನಿಗೊಂಡ ಪಾಸ್‌ಪೋರ್ಟ್ ಮರುಜಾರಿ, ಅಪ್ರಾಪ್ತ ವಯಸ್ಕರ ಪಾಸ್‌ಪೋರ್ಟ್ ಅರ್ಜಿ, ಪೊಲೀಸ್ ಪರಿಶೀಲನೆ ಪ್ರಕ್ರಿಯೆ, ಅರ್ಜಿ ಸ್ಥಿತಿ ಪರಿಶೀಲನೆ ಸೇರಿದಂತೆ ಅಗತ್ಯ ಮಾರ್ಗದರ್ಶನ ಮತ್ತು ಸಹಾಯ ಸೇವೆಗಳು ದೊರೆಯುತ್ತಿವೆ.ಅರ್ಜಿದಾರರು ಮೊದಲು Passport Seva Portal ವೆಬ್‌ಸೈಟ್ (https://www.passportindia.gov.in/) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕು. ಬಳಿಕ ನಿಗದಿತ ದಿನಾಂಕ ಮತ್ತು ಸಮಯಕ್ಕೆ ಪಾಸ್‌ಪೋರ್ಟ್ ಸೇವಾ ಕೇಂದ್ರಕ್ಕೆ ಭೇಟಿ ನೀಡಿ ಮೂಲ ದಾಖಲೆಗಳ ಪರಿಶೀಲನೆ ಮಾಡಿಸಬೇಕು.

ಆನ್‌ಲೈನ್ ಅರ್ಜಿ ಸಲ್ಲಿಸುವ ವೇಳೆ ಗದಗ ಸಿಟಿ ಪಾಸ್‌ಪೋರ್ಟ್ ಸೇವಾ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ತಿಳಿಸಲಾಗಿದೆ.

> "ಪಾಸ್‌ಪೋರ್ಟ್ ಸಂಬಂಧಿತ ಎಲ್ಲಾ ಸೇವೆಗಳು ಈಗ ಗದಗದಲ್ಲೇ ಸುಲಭವಾಗಿ ಲಭ್ಯವಾಗುತ್ತಿವೆ. ಸಾರ್ವಜನಿಕರು ಈ ಸೌಲಭ್ಯಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸದುಪಯೋಗಪಡಿಸಿ ಕೊಳ್ಳಬೇಕು."
> – ಎಸ್.ಎಸ್. ಶಿರಹಟ್ಟಿ

**ತಿಮ್ಮಾಪೂರಲ್ಲಿ ಕುಡಿಯುವ ನೀರಿಗೆ ಹಾಹಾಕಾರ– ಜೆಜೆಎಂ ಯೋಜನೆ ವೈಫಲ್ಯ..! ವಾರಕ್ಕೊಮ್ಮೆ ನೀರು?**

# "ಬತ್ತಿದ ಕೆರೆ"–ಬಾಯಾರಿದ ಗ್ರಾಮ!

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಕುಡಿಯುವ ನೀರಿಗೆ ಪ್ರಮುಖ ಆಧಾರವಾಗಿದ್ದ ಕೆರೆ ಸಂಪೂರ್ಣ ಬತ್ತಿಹೋಗಿದ್ದು, ಗ್ರಾಮ ಪಂಚಾಯಿತಿ ನಿರ್ಲಕ್ಷ್ಯದಿಂದ ಗ್ರಾಮಸ್ಥರು ತೀವ್ರ ನೀರಿನ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೇಸಿಗೆಯ ತಾಪಮಾನ ಹೆಚ್ಚಾಗುತ್ತಿದ್ದಂತೆ ಸಮಸ್ಯೆ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದೆ.

ಗ್ರಾಮಕ್ಕೆ ಕುಡಿಯುವ ನೀರು ಒದಗಿಸಲು ಜಾರಿಗೆ ತಂದ ಬಹುಗ್ರಾಮ ಕುಡಿಯುವ ನೀರಿನ ಯೋಜನೆ (ಜೆಜೆಎಂ) ಅಡಿಯಲ್ಲಿ ತುಂಗಭದ್ರಾ ನದಿಯಿಂದ ನೀರು ಸರಬರಾಜು ಮಾಡುವ ವ್ಯವಸ್ಥೆ ಸಮರ್ಪಕವಾಗಿ ಕಾರ್ಯನಿರ್ವಹಿಸದೆ, ವಾರಕ್ಕೊಮ್ಮೆ ಮಾತ್ರ ನೀರು ಪೂರೈಕೆ ಆಗುತ್ತಿದೆ. ಇದರಿಂದ ಮೂರು ವಾರ್ಡುಗಳ ಗ್ರಾಮಕ್ಕೆ ಸಿಗುವ ನೀರು ಅತ್ಯಲ್ಪವಾಗಿದ್ದು, ಮನೆ ಬಳಕೆಗೂ ಹಾಗೂ ಪಶುಗಳಿಗೆ ಸಾಕಾಗುತ್ತಿಲ್ಲ.

ಗ್ರಾಮಸ್ಥರು ಹಾಗೂ ಮಹಿಳೆಯರು ಹಲವು ಬಾರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವಲೀಲಾ ಗೂಳಪ್ಪ ಅವರ ಗಮನಕ್ಕೆ ಸಮಸ್ಯೆಯನ್ನು ತಂದರೂ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ್ದಾರೆ. ಅಧಿಕಾರಿಗಳಿಂದ ಕೇವಲ ಭರವಸೆ ಮಾತುಗಳಷ್ಟೇ ಸಿಗುತ್ತಿವೆ ಎಂದು ಸಾರ್ವಜನಿಕರು



ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಟ್ಯಾಂಕರ್ ಅವಲಂಬನೆ ಬಡವರಿಗೆ ಭಾರ :**

ಗ್ರಾಮದಲ್ಲಿ ಬೇರೆ ನೀರಿನ ಮೂಲಗಳಿಲ್ಲದ ಕಾರಣ ಜನರು ಖಾಸಗಿ ಟ್ಯಾಂಕರ್ ಮೂಲಕ ಸುಮಾರು ರೂ. 1500 ವೆಚ್ಚದಲ್ಲಿ ನೀರು ತರಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ದೊಡ್ಡ ಹೊರೆ ಆಗಿದ್ದು, ಕುಡಿಯುವ ನೀರೇ ದುಬಾರಿ ವಸ್ತುವಾಗಿ ಪರಿಣಮಿಸಿದೆ.

> "ಈ ಸಮಸ್ಯೆ ಇದೇ ರೀತಿಯಲ್ಲಿ ಮುಂದುವರಿದರೆ ಗ್ರಾಮಸ್ಥರ ಆಕ್ರೋಶ ತೀವ್ರವಾಗಲಿದೆ," ಎಂದು ರೈತ ಸಂಘದ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, ಹುಚ್ಚೀರಪ್ಪ ಜೋಗಿನ, ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ಹನುಮಪ್ಪ ತಳವಾರ, ಕಪತ್ತಪ್ಪ ಸೊಂಪೂರ, ರಾಯಣ್ಣ ಕಂಡ್ರಿ, ಗೀರಿಶ ಗುಡ್ಲಾನೂರ ಸೇರಿದಂತೆ ಹಲವರು ಎಚ್ಚರಿಕೆ ನೀಡಿದ್ದಾರೆ.

**ಸರ್ಕಾರದ ಆದೇಶಕ್ಕೂ ಸ್ಪಂದನೆ ಇಲ್ಲ :**

ರಾಜ್ಯ ಸರ್ಕಾರ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಕೊರತೆ ತಡೆಗಟ್ಟಲು ಕೋಟ್ಯಾಂತರ ರೂಪಾಯಿ ಮೀಸಲಿಟ್ಟಿದ್ದರೂ, ತಿಮ್ಮಾಪೂರ ಸೇರಿದಂತೆ ಹಲವೆಡೆ ಸಮಸ್ಯೆ ಮುಂದುವರಿದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀರಿನ ಸಮಸ್ಯೆ ಕುರಿತು ಜಿಲ್ಲಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡುವಂತೆ ಸೂಚನೆ ನೀಡಿದ್ದರೂ, ಸ್ಥಳೀಯ ಮಟ್ಟದಲ್ಲಿ ಪರಿಣಾಮಕಾರಿ ಕ್ರಮ ಕಾಣಿಸುತ್ತಿಲ್ಲ.

**ಎರಡು ಗ್ರಾಮ ಪಂಚಾಯತಿಗಳ ಜವಬ್ದಾರಿ**

# ಕೆಲಸದ ಒತ್ತಡ ಹೆಚ್ಚಾಗಿ ಆತ್ಮಹತ್ಯೆ ಮಾಡಿಕೊಂಡ್ರಾ ಪಿಡಿಒ?

■ವಿಜಯಸಾಕ್ಷಿ ಸುದ್ದಿ, ರೋಣ

ಎರಡು ಗ್ರಾಮ ಪಂಚಾಯತಿಗಳ ಕಾರ್ಯಭಾರ ಹಾಗೂ ಲೋಕಾಯುಕ್ತ ತನಿಖೆಯಿಂದ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದ ಪಿಡಿಒ ಮಕ್ತುಂ ಹುಸೇನ್ ಕರಡಿಗುಡ್ಡ (46) ಅವರು ಪಟ್ಟಣದ ಶ್ರೀನಗರದಲ್ಲಿನ ಬಾಡಿಗೆ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಗುರುವಾರ ಬೆಳಗಿನ ಜಾವ ಬೆಳಕಿಗೆ ಬಂದಿದೆ.

ಮೂಲತಃ ಧಾರವಾಡದವರಾದ ಮಕ್ತುಂ ಹುಸೇನ್ ಅವರು ಎರಡು ತಿಂಗಳ ಹಿಂದೆ ರೋಣ ತಾಲೂಕಿನಲ್ಲಿ ಪಿಡಿಒ ಆಗಿ ಸೇವೆ ಆರಂಭಿಸಿದ್ದರು. ತಾಲೂಕಿನ ಅಸೂಟಿ ಹಾಗೂ ಕೊತಬಾಳ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಯಾಗಿ ಅವರನ್ನು ನಿಯೋಜಿಸಲಾಗಿತ್ತು. ಪಿಡಿಒಗಳ ಕೊರತೆಯಿಂದಾಗಿ

> "ನನ್ನ ಗಂಡ ತುಂಬಾ ಒಳ್ಳೆಯ ಮನುಷ್ಯ. ನನಗೆ ಮೂವರು ಗಂಡು ಮಕ್ಕಳು ಇದ್ದಾರೆ. ನನ್ನ ಸ್ಥಿತಿ ಹೀಗಾಗಬಾರದಿತ್ತು. ಇಷ್ಟು ಚಿಕ್ಕ ಮಕ್ಕಳನ್ನು ಕಟ್ಟಿಕೊಂಡು ಜೀವನವನ್ನು ಹೇಗೆ ನಡೆಸಲಿ"
> – ಆಸ್ಮಾಬಾನು, ಮೃತನ ಪತ್ನಿ



ಎರಡು ಗ್ರಾಮ ಪಂಚಾಯತಿಗಳ ಹೊಣೆಗಾರಿಕೆಯನ್ನು ವಹಿಸಿಕೊಂಡಿದ್ದ ಅವರು ಕೆಲಸದ ಒತ್ತಡದಿಂದ ಬಳಲುತ್ತಿದ್ದರು ಎನ್ನಲಾಗಿದೆ.

ಇದಲ್ಲದೆ, 2021ರಿಂದ 2023ರ ಅವಧಿಗೆ ಸಂಬಂಧಿಸಿದಂತೆ ಅವರ ಮೇಲೆ ಲೋಕಾಯುಕ್ತ ಪ್ರಕರಣ ದಾಖಲಾಗಿತ್ತು ಎಂದು ತಿಳಿದು ಬಂದಿದೆ. ಕೊತಬಾಳ ಗ್ರಾಮ ಪಂಚಾಯತಿಯಲ್ಲಿ ನರೇಗಾ ಸಂಬಂಧಿತ ಪ್ರಕರಣವೂ ಇದ್ದು, "ಯಾರೋ ಮಾಡಿದ ತಪ್ಪಿಗೆ ನಾವು ಬೆಂಗಳೂರಿಗೆ ಅಲೆದಾಡಬೇಕಾಗಿದೆ" ಎಂದು ಅವರು ತಮ್ಮ ಆಪ್ತರ ಬಳಿ ಅಸಮಾಧಾನ ವ್ಯಕ್ತಪಡಿಸಿದ್ದಾಗಿ ತಿಳಿದು ಬಂದಿದೆ.

ಮೃತರ ಪತ್ನಿ ಆಸ್ಮಾಬಾನು ಅವರು ಮಾಧ್ಯಮಗಳಿಗೆ ನೀಡಿದ ಮಾಹಿತಿಯಂತೆ, "ಎರಡು ಗ್ರಾಪಂಗಳ ಕೆಲಸ ನಿರ್ವಹಿಸಲು ಕಷ್ಟವಾಗುತ್ತಿದೆ ಎಂದು ಅವರು ಆಗಾಗ ಹೇಳುತ್ತಿದ್ದರು.

> "ಅಸೂಟಿ ಗ್ರಾಮ ಪಂಚಾಯತ್ ಸಮಸ್ಯೆ ಬಗ್ಗೆ ನನ್ನ ಗಮನಕ್ಕೆ ತಂದಿದ್ದರು. ನಾನು ಸಹ ಅವರಿಗೆ ಧೈರ್ಯ ನೀಡಿ, ಸ್ವತಃ ಅಲ್ಲಿಗೆ ತೆರಳಿ ಸಮಸ್ಯೆ ಬಗೆಹರಿಸಿದ್ದೆ. ಅಲ್ಲದೆ ಗ್ರಾಪಂ ಬದಲಾಯಿಸುವ ಬಗ್ಗೆಗೂ ತಿಳಿಸಿದ್ದೆ. 'ಚಿಕ್ಕ ಮಕ್ಕಳು ಇದ್ದಾರೆ ಸರ್, ಶಾಲೆ ಆರಂಭವಾದ ತಕ್ಷಣ ಇಲ್ಲಿಯೇ ಶಾಲೆಗೆ ಸೇರಿಸುತ್ತೇನೆ' ಎಂದು ಹೇಳಿದ್ದರು. ಆದರೆ ಅವರು ಹೀಗೆ ಮಾಡಿಕೊಂಡಿರುವುದು ನನಗೆ ಅರ್ಥವಾಗುತ್ತಿಲ್ಲ,"
> – **ಚಂದ್ರಶೇಖರ್ ಕಂದಕೂರ,** ಇಒ–ರೋಣ ತಾಲೂಕು ಪಂಚಾಯತ,

> "ಸಿಪಿಐ ಸಾಹೇಬರು ಹಾಗೂ ನಾನು ಸ್ಥಳಕ್ಕೆ ಭೇಟಿ ನೀಡಿದ್ದೇವೆ. ನಮ್ಮ ವಿಶೇಷ ತನಿಖಾ ತಂಡವೂ ಆಗಮಿಸಿದೆ. ಮುಂದಿನ ಕ್ರಮಗಳ ಕುರಿತು ನಂತರ ಹೆಚ್ಚಿನ ಮಾಹಿತಿಯನ್ನು ನೀಡಲಾಗುವುದು"
> – **ಪ್ರಕಾಶ ಬಣಕಾರ,** ಪಿಎಸ್ಐ


▸▸4ನೇ ಪುಟಕ್ಕೆ

**'ಸಮಾಧಾನ ಸಮಾರೋಹ–2026' ಘೋಷಣೆ | ಆಗಸ್ಟ್ 21-23 ವಿಶೇಷ ಲೋಕ ಅದಾಲತ್ | 4,328 ಪ್ರಕರಣಗಳಿಗೆ ಸಂಧಾನದ ಅವಕಾಶ**

# ಬಾಕಿ ಪ್ರಕರಣಗಳಿಗೆ ಸುಪ್ರೀಂ ಕೋರ್ಟ್ ಮಹತ್ವದ ಹೆಜ್ಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಲು 'ಸಮಾಧಾನ ಸಮಾರೋಹ–2026' ಎಂಬ ವಿಶೇಷ ಲೋಕ ಅದಾಲತ್‌ನ್ನು ಆಗಸ್ಟ್ 21, 22 ಮತ್ತು 23 ರಂದು ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯನಿರ್ವಾಹಕ



ಅಧ್ಯಕ್ಷೆ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿ ಅನು ಸಿವರಾಮನ್ ತಿಳಿಸಿದ್ದಾರೆ.

ಗುರುವಾರ ಬೆಂಗಳೂರಿನ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು 4,328 ಬಾಕಿ ಪ್ರಕರಣಗಳನ್ನು ಸಂಧಾನಕ್ಕಾಗಿ ಗುರುತಿಸಿ ಈ ವಿಶೇಷ ಲೋಕ ಅದಾಲತ್ ಆಯೋಜಿಸಿದ್ದು, ಆಸಕ್ತ ಕಕ್ಷಿದಾರರು ತಮ್ಮ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ನೋಂದಣಿ ಮಾಡಿಕೊಳ್ಳಬಹುದು ಎಂದು ಹೇಳಿದರು.

ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸುವ ಮೂಲಕ ಸಾರ್ವಜನಿಕರು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಂದಿನಿಂದಲೇ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಆಯ್ಕೆಯಾದ ಪ್ರಕರಣಗಳನ್ನು ನೋಂದಾಯಿತ ಕಾನೂನು ಸಮನ್ವಯಕರ ಮಧ್ಯಸ್ಥಿಕೆಯಲ್ಲಿ ತಾವು ಇರುವ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿಯೇ ಸಂಧಾನದ ಮೂಲಕ ಬಗೆಹರಿಸಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ.

**ನೋಂದಣಿ ವಿವರಗಳು**

ಆಸಕ್ತ ಕಕ್ಷಿದಾರರು ಅಥವಾ ಅವರ ವಕೀಲರು ಮೇ 31, 2026 ರೊಳಗೆ ಗೂಗಲ್ ಫಾರ್ಮ್ ಮೂಲಕ ಅರ್ಜಿ ಸಲ್ಲಿಸಬಹುದು:

https://forms.gle/jqxefqF4BCWzukoP6

ನೋಟಿಸ್ ಪಡೆದ ಕಕ್ಷಿದಾರರು ತಮ್ಮ ಜಿಲ್ಲಾ ಅಥವಾ ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರದ ಮುಂದೆ ಖುದ್ದಾಗಿ ಅಥವಾ ವಿಡಿಯೋ ಕಾನ್ಫರೆನ್ಸ್ ಮೂಲಕ ಪೂರ್ವ ಸಂಧಾನ ಸಭೆಗಳಲ್ಲಿ ಭಾಗವಹಿಸಬಹುದು.

> "ಈ ವಿಶೇಷ ಲೋಕ ಅದಾಲತ್ ಜನರಿಗೆ ಕಡಿಮೆ ವೆಚ್ಚದಲ್ಲಿ, ಕಡಿಮೆ ಸಮಯದಲ್ಲಿ ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅಪೂರ್ವ ಅವಕಾಶ ಒದಗಿಸುತ್ತದೆ."
> –**ಅನು ಶಿವರಾಮನ್,** ನ್ಯಾಯಾಧೀಶರು, ರಾಜ್ಯ ಹೈಕೋರ್ಟ್

▸▸2ನೇ ಪುಟಕ್ಕೆ

**ರೇಷ್ಮಾ ಸಿಕಂದರ್ ಅಧ್ಯಕ್ಷರಾಗಿ ಆಯ್ಕೆ–ಬಿಜೆಪಿಗೆ ಹಿನ್ನಡೆ– ರಾಜಕೀಯ ಲೆಕ್ಕಾಚಾರ ಬದಲಿಸಿದ ಫಲಿತಾಂಶ।**

# ಹಗರಿಬೊಮ್ಮನಹಳ್ಳಿ ಪುರಸಭೆ ಗದ್ದುಗೆ ಕಾಂಗ್ರೆಸ್ ಕೈಗೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಬಹುಕಾಲದಿಂದ ತೀವ್ರ ಕುತೂಹಲ ಕೆರಳಿಸಿದ್ದ ಪುರಸಭೆ ಅಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಮೇಲುಗೈ ಸಾಧಿಸಿದ್ದು, ರೇಷ್ಮಾ ಸಿಕಂದರ್ ಅವರು ಭರ್ಜರಿ ಜಯ ಸಾಧಿಸಿ ಅಧ್ಯಕ್ಷೆಯಾಗಿ ಆಯ್ಕೆಯಾಗಿದ್ದಾರೆ.

ಪುರಸಭೆ ಕಚೇರಿಯಲ್ಲಿ ಗುರುವಾರ ಬೆಳಿಗ್ಗೆ 10 ಗಂಟೆಯಿಂದಲೇ ರಾಜಕೀಯ ಚಟುವಟಿಕೆಗಳು ಚುರುಕುಗೊಂಡಿದ್ದವು. ಬಿಸಿಲಿನ ತಾಪವನ್ನೂ ಲೆಕ್ಕಿಸದೆ ಸಾರ್ವಜನಿಕರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದರು. ನಾಮಪತ್ರ ಸಲ್ಲಿಕೆ ಸ್ವಲ್ಪ ತಡವಾಗಿ ನಡೆದರೂ, ಬಿಜೆಪಿ ಪರವಾಗಿ ಸುರೇಶ್ ಬಣಕಾರ ಹಾಗೂ ಕಾಂಗ್ರೆಸ್ ಪರವಾಗಿ ರೇಷ್ಮಾ ಸಿಕಂದರ್ ಸ್ಪರ್ಧಿಸಿದರು.

ಚುನಾವಣೆಯಲ್ಲಿ ಬಿಜೆಪಿ ಪರ 11 ಸದಸ್ಯರಲ್ಲಿ 8 ಮಂದಿ ಮಾತ್ರ ಭಾಗವಹಿಸಿದ್ದು, ಶಾಸಕರ ಒಂದು ಮತ ಸೇರಿ ಒಟ್ಟು 9 ಮತಗಳು ಲಭಿಸಿವೆ. ಕಾಂಗ್ರೆಸ್‌ನ 12 ಸದಸ್ಯರು ಹಾಗೂ ಸಂಸದ ಈ. ತುಕಾರಾಂ ಅವರ ಮತ ಸೇರಿ ರೇಷ್ಮಾ ಸಿಕಂದರ್ ಅವರಿಗೆ

> "ನನ್ನನ್ನು ಅಧ್ಯಕ್ಷೆಯನ್ನಾಗಿ ಆಯ್ಕೆ ಮಾಡಿದ ಎಲ್ಲಾ ಸದಸ್ಯರಿಗೆ, ಸಂಸದರು ಹಾಗೂ ಭೀಮಾನಾಯ್ಕ ಅವರಿಗೆ ನಾನು ಚಿರಋಣಿ. ಪುರಸಭೆಯ ಎಲ್ಲಾ ವಾರ್ಡ್‌ಗಳ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತೇನೆ."
> – **ರೇಷ್ಮಾ ಸಿಕಂದರ್,** ನೂತನ ಅಧ್ಯಕ್ಷೆ,



> "ಕಾಂಗ್ರೆಸ್ ಪಕ್ಷ ಯಾವಾಗಲೂ ಮಾತಿಗಿಂತ ಕೃತಿಗೆ ಆದ್ಯತೆ ನೀಡುತ್ತದೆ. ನಮ್ಮ ಪಕ್ಷ ತನ್ನದೇ ಆದ ಧ್ಯೇಯೋದ್ದೇಶಗಳಂತೆ ನಡೆದುಕೊಳ್ಳುತ್ತದೆ."
> – **ಈ. ತುಕಾರಾಂ,** ಸಂಸದರು,

13 ಮತಗಳು ಲಭಿಸಿ ಸ್ಪಷ್ಟ ಬಹುಮತದೊಂದಿಗೆ ಜಯ ಸಾಧಿಸಿದರು. ಸಹಾಯಕ ಆಯುಕ್ತರು ಅಧಿಕೃತವಾಗಿ ಫಲಿತಾಂಶ ಘೋಷಿಸುತ್ತಿದ್ದಂತೆ ಕಾಂಗ್ರೆಸ್ ಪಾಳಯದಲ್ಲಿ ಸಂಭ್ರಮ ಮುಗಿಲು ಮುಟ್ಟಿತು. ಪಟಾಕಿ ಸಿಡಿಸಿ, ಘೋಷಣೆಗಳನ್ನು ಕೂಗಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಅಧ್ಯಕ್ಷೆಯಾಗಿ ಆಯ್ಕೆಯಾದ ನಂತರ ರೇಷ್ಮಾ ಸಿಕಂದರ್ ಅವರು ಜಗಜ್ಯೋತಿ ಬಸವಣ್ಣನವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಆಶೀರ್ವಾದ ಪಡೆದರು. ಉಪಾಧ್ಯಕ್ಷರಾದ ನೇತ್ರಾವತಿ ಹುಚ್ಚಪ್ಪ ಸೇರಿದಂತೆ ಪವಾಡಿ ಹನುಮಂತಪ್ಪ, ಮರಿ ರಾಮಪ್ಪ, ಗಣೇಶ್, ರಾಜೇಶ್ ಬ್ಯಾಡಗಿ, ಅಜೀಜುಲ್ಲಾ, ಖಾಜಾ ಬನ್ನಿ ಅಲ್ಲಾಭಕ್ಷಿ, ಗುಂಡ್ಲು ಸರಸ್ವತಿ, ಮಂಜುಳಾ ಕೃಷ್ಣ ನಾಯ್ಕ, ಅಂಬಿಕಾ ದೇವಿಂದ್ರಪ್ಪ, ಇಸ್ಮಾಯಿಲ್ ಸಾಬ್, ಜೋಗಿ ಹನುಮಂತಪ್ಪ, ಕೆ.ಎಂ. ನವೀನ್ ಕುಮಾರ್, ದೀಪಕ್ ಕಠಾರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಿಜೆಪಿ ಸದಸ್ಯರಾದ ಮಲ್ಲೇಶ್ವರಿ ಭರತ್, ಎಚ್.ಎಂ. ಚೆನ್ನಮ್ಮ ವಿಜಯಕುಮಾರ್, ಭೋವಿ ವೀರೇಶ್ ಗೈರಾಗಿದ್ದರು. ಹಗರಿಬೊಮ್ಮನಹಳ್ಳಿ ಪುರಸಭೆಯಲ್ಲಿ ಕಾಂಗ್ರೆಸ್ ಗೆಲುವು ಸ್ಥಳೀಯ ರಾಜಕೀಯದಲ್ಲಿ ಮಹತ್ವದ ಬದಲಾವಣೆಗೆ ನಾಂದಿ ಹಾಡಿದ್ದು, ಮುಂದಿನ ದಿನಗಳಲ್ಲಿ ಅಭಿವೃದ್ಧಿ ರಾಜಕಾರಣಕ್ಕೆ ವೇದಿಕೆ ಸಿದ್ಧವಾಗಿದೆ ಎಂಬ ಸಂದೇಶ ನೀಡಿದೆ.

> "ಕಾಂಗ್ರೆಸ್ ಪಕ್ಷ ಮಹಿಳೆಯರ ಪರವಾಗಿದೆ ಎಂಬುದನ್ನು ಮತ್ತೆ ಸಾಬೀತುಪಡಿಸಿದೆ. ರೇಷ್ಮಾ ಸಿಕಂದರ್ ಅಧ್ಯಕ್ಷೆಯಾಗಲು ಸಂಸದ ತುಕಾರಾಂ ಮತ್ತು ಭೀಮಾನಾಯ್ಕ ಅವರ ಪಾತ್ರ ಮಹತ್ತರವಾಗಿದೆ."
> – **ಡಾ. ಸಾಹಿರಾಬಾನು,** ಅಧ್ಯಕ್ಷರು, ಜಿಲ್ಲಾ ಮಹಿಳಾ ಕಾಂಗ್ರೆಸ್,

### ರಾಜಕೀಯ ವಲಯದಲ್ಲಿ ಗರಿಗೆದರಿದ ಚರ್ಚೆ

# ವಿಜಯನಗರ ಯುವ ಕಾಂಗ್ರೆಸ್ ಅಧ್ಯಕ್ಷ ಅಮಾನತು!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ವಿಜಯನಗರ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಬಿ. ನಾಯ್ಕ ಅವರ ಅಮಾನತು ಸ್ಥಳೀಯ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದ್ದು, ಸಂಘಟನಾ ಶಿಸ್ತಿನೊಂದಿಗೆ ನಾಯಕತ್ವದ ಶೈಲಿ ಹಾಗೂ ನೆಲಮಟ್ಟದ ಸಂಪರ್ಕಗಳ ಕುರಿತು ಪ್ರಶ್ನೆಗಳು ಉದ್ಭವಿಸಿವೆ.



ಸ್ಥಳೀಯ ಮೂಲಗಳ ಪ್ರಕಾರ, ಅಶೋಕ್ ಬಿ. ನಾಯ್ಕ ಹಾಗೂ ಅವರ ತಂದೆ, ಹಗರಿಬೊಮ್ಮನಹಳ್ಳಿ ಕ್ಷೇತ್ರದ ಮಾಜಿ ಶಾಸಕ ಭೀಮ ನಾಯಕ್ ಅವರು ತಮ್ಮ ಕ್ಷೇತ್ರದಲ್ಲಿ ದೀರ್ಘಕಾಲ ಸಕ್ರಿಯವಾಗಿ ಕಾಣಿಸಿಕೊಳ್ಳದೇ ಇರುವುದರಿಂದ ಕಾರ್ಯಕರ್ತರಲ್ಲಿ ಅಸಮಾಧಾನ ಹೆಚ್ಚಾಗಿದೆ. ಸಂಘಟನಾ ಚಟುವಟಿಕೆಗಳಲ್ಲಿ ಕಡಿಮೆ ಭಾಗವಹಿಸುವಿಕೆ ಮತ್ತು ಕಾರ್ಯಕರ್ತರೊಂದಿಗೆ ನೇರ ಸಂಪರ್ಕದ ಕೊರತೆ ಈ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ತಿಳಿದು ಬರುತ್ತಿದೆ.

ಎಪ್ರಿಲ್ 1ರಂದು ಭೀಮ ನಾಯಕ್ ಅವರ ಜನ್ಮದಿನದ ಅಂಗವಾಗಿ ಅಳವಡಿಸಲಾದ ಬ್ಯಾನರ್‌ನಲ್ಲಿ ಪಕ್ಷದ ಚಿಹ್ನೆ ಕಾಣಿಸದಿರುವುದು ಮತ್ತಷ್ಟು ಅನುಮಾನಗಳಿಗೆ ಕಾರಣವಾಗಿದೆ. ಈ ಘಟನೆ ವೈಯಕ್ತಿಕ ಪ್ರಚಾರಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂಬ ಅಭಿಪ್ರಾಯಕ್ಕೂ ಕಾರಣವಾಗಿದೆ.

ಇದರಿಂದ ಕೆಲ ಕಾರ್ಯಕರ್ತರ ವಲಯದಲ್ಲಿ ಭೀಮ ನಾಯಕ್ ಅವರು ಭವಿಷ್ಯದಲ್ಲಿ ಇತರ ರಾಜಕೀಯ ಪಕ್ಷಗಳಿಗೆ, ವಿಶೇಷವಾಗಿ ಬಿಜೆಪಿ ಸೇರಬಹುದೇ ಎಂಬ ಊಹಾಪೋಹಗಳು ಕೇಳಿ ಬರುತ್ತಿವೆ. ಈ ಕುರಿತು ಅಧಿಕೃತ ದೃಢೀಕರಣ ಇಲ್ಲದಿದ್ದರೂ, ಸಂಘಟನೆಯೊಳಗಿನ ವಿಶ್ವಾಸದ ಸ್ಥಿತಿಯನ್ನು ಇದು ಪ್ರತಿಬಿಂಬಿಸುತ್ತದೆ.

ರಾಜಕೀಯ ವಿಶ್ಲೇಷಕರ ಪ್ರಕಾರ, ಈ ಬೆಳವಣಿಗೆ ಕೇವಲ ಅಮಾನತು ಕ್ರಮವಷ್ಟೇ ಅಲ್ಲ, ಸ್ಥಳೀಯ ಮಟ್ಟದಲ್ಲಿ ನಾಯಕತ್ವದ ಜವಾಬ್ದಾರಿ, ನಿಷ್ಠೆ ಹಾಗೂ ಸಂಘಟನಾ ಬಲದ ಕುರಿತು ಪ್ರಶ್ನೆಗಳನ್ನು ಎಬ್ಬಿಸುವ ಬೆಳವಣಿಗೆಯಾಗಿದೆ.

# ಇಂದು ಬುದ್ಧ ಜಯಂತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಮೇ 1ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತಿ ವಹಿಸಲಿದ್ದು, ಕಾರ್ಮಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ಶಾಸಕರಾದ ಅಬ್ಬಯ್ಯ ಪ್ರಸಾದ, ಭರಮಗೌಡ ಅಲಗೌಡ ಕಾಗೆ, ಸೈಯದ್ ಅಜೀಮ್‌ಪೀರ್ ಎಸ್. ಖಾದ್ರಿ, ನಾಗೇಂದ್ರ ಕುಮಾರ್ ಹಾಗೂ ಶಿವಲೀಲಾ ವಿನಯ ಕುಲಕರ್ಣಿ ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ವಹಿಸಿಕೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ವಿನಯ ಕುಲಕರ್ಣಿ, ಎನ್.ಎಚ್. ಕೋನರಡ್ಡಿ, ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್. ಪಾಟೀಲ, ಎಫ್. ಹೆಚ್. ಜಕಪ್ಪನವರ, ಅಡಿವೇಶ ಗಿರೆಪ್ಪ ಇಟಗಿ, ಜ್ಯೋತಿ ಪಾಟೀಲ, ಶಾಕೀರ್ ಸನದಿ ಹಾಗೂ ಪ್ರಕಾಶ ಹಳಿಯಾಳ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ರಾಮ್ ಪ್ರಸಾತ್ ಮನೋಹರ ವಿ ಹಾಗೂ ಜಾನಕಿ ಕೆ.ಎಂ. ಉಪಸ್ಥಿತರಿರಲಿದ್ದಾರೆ. ಬುದ್ಧಿಷ್ಠ ಪಾಲಿ ಎಜ್ಯುಕೇಶನ್ ಮತ್ತು ರಿಸರ್ಚ್ ಟ್ರಸ್ಟ್ ಅಧ್ಯಕ್ಷ ಪಬ್ಬಜ್ಜೋರವಿತಿಪಾಲಿವಿಜ್ಜಾಮುನಿಯೊ ಉಪಸ್ಥಿತಿರಲಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಇತಿಹಾಸ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಡಾ. ಶಿಲಾಧರ ಮುಗಳಿ ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಸ್ನೇಹಲ್ ಆರ್., ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿಲ್ಲಾ ಪಂಚಾಯತ್ ಸಿಇಓ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಎಸ್. ಘಾಳಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ, ಕುಷ್ಟಗಿ ಭಾಗದ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು ವಿಶ್ವನಾಥ ಖಾನಾಪೂರ ನೇತೃತ್ವದಲ್ಲಿ ಮನವಿ

# ಕುಷ್ಟಗಿವರೆಗೆ ಹುಬ್ಬಳ್ಳಿ – ಬೆಂಗಳೂರು ರೈಲು ವಿಸ್ತರಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಿಂದ ಬೆಂಗಳೂರಿಗೆ ಸಂಚರಿಸುತ್ತಿರುವ ಸೂಪರ್ ಫಾಸ್ಟ್ ರೈಲು ಸಂಖ್ಯೆ 20688/20687 ಅನ್ನು ಕುಷ್ಟಗಿವರೆಗೆ ವಿಸ್ತರಿಸಬೇಕೆಂದು ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಎಸ್.ಎಸ್.ಎಸ್. ಹುಬ್ಬಳ್ಳಿ-ಕೆ.ಎಸ್.ಆರ್. ಬೆಂಗಳೂರು ಜಂಕ್ಷನ್ ನಡುವೆ ಸಂಚರಿಸುತ್ತಿರುವ ಈ ರೈಲು ಸೇವೆಯನ್ನು ಕುಷ್ಟಗಿವರೆಗೆ ವಿಸ್ತರಿಸಿದರೆ ಗದಗ, ಕುಷ್ಟಗಿ ಹಾಗೂ ಸುತ್ತಮುತ್ತಲಿನ ಪ್ರದೇಶದ ಜನತೆಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಈ ರೈಲು ರಾತ್ರಿ 11.30ಕ್ಕೆ ಬೆಂಗಳೂರಿನಿಂದ ಹೊರಟು ಮುಂಜಾನೆ 5.30ಕ್ಕೆ ಹುಬ್ಬಳ್ಳಿಗೆ ತಲುಪುತ್ತದೆ. ಇದನ್ನು ಮುಂಜಾನೆ 5.50ಕ್ಕೆ ಹುಬ್ಬಳ್ಳಿಯಿಂದ ಮುಂದುವರೆಸಿ ಗದಗ ಜಂಕ್ಷನ್ ಮೂಲಕ ಕುಷ್ಟಗಿವರೆಗೆ ಸಾಗಿಸಿದರೆ ಪ್ರಯಾಣಿಕರಿಗೆ ಸುರಕ್ಷಿತ ಮತ್ತು ಸುಗಮ ಸಂಚಾರ ಸಿಗಲಿದೆ ಎಂದು ಹೇಳಿದ್ದಾರೆ.

**ಪ್ರಸ್ತಾವಿತ ವೇಳಾಪಟ್ಟಿ**

ಬೆಳಿಗ್ಗೆ 6.40ಕ್ಕೆ ಗದಗ ಜಂಕ್ಷನ್ ಆಗಮನ ಬೆಳಿಗ್ಗೆ 8.40ಕ್ಕೆ ಕುಷ್ಟಗಿ ತಲುಪುವ ಯೋಜನೆ ಸಂಜೆ ಕುಷ್ಟಗಿಯಿಂದ ಹೊರಟು ಗದಗ ಹುಬ್ಬಳ್ಳಿ ಮಾರ್ಗವಾಗಿ ರಾತ್ರಿ 11.30ಕ್ಕೆ ಬೆಂಗಳೂರು ಸಂಪರ್ಕ




ಈ ಕುರಿತು ಕುಷ್ಟಗಿ ರೈಲ್ವೆ ಹೋರಾಟ ಸಮಿತಿ ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಈಗಾಗಲೇ ಕೇಂದ್ರ ರೈಲ್ವೆ ಖಾತೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಸಲ್ಲಿಸಿರುವುದನ್ನು ಅವರು ಉಲ್ಲೇಖಿಸಿದ್ದಾರೆ.

ಈ ರೈಲು ವಿಸ್ತರಣೆಯಿಂದ ಗದಗ-ವಿಜಯಪುರ ಮಾರ್ಗದ ಪ್ರಯಾಣಿಕರು, ಉದ್ಯೋಗ ಹಾಗೂ ವ್ಯಾಪಾರ ನಿಮಿತ್ತ ಬೆಂಗಳೂರಿಗೆ ತೆರಳುವವರಿಗೆ ಹೆಚ್ಚಿನ ಅನುಕೂಲವಾಗಲಿದೆ.

ಜೊತೆಗೆ ಕುಷ್ಟಗಿಯಿಂದ ಗದಗ-ಹುಬ್ಬಳ್ಳಿ ಮಾರ್ಗವಾಗಿ ಬೆಳಿಗ್ಗೆ ಇನ್ನೊಂದು ಪ್ಯಾಸೆಂಜರ್ ರೈಲು ಆರಂಭಿಸುವ ಅಗತ್ಯವಿದೆ ಎಂದು ಮನವಿ ಮಾಡಲಾಗಿದೆ.

ಕೇಂದ್ರ ಸಚಿವರು, ಸಂಸದರು ಹಾಗೂ ರೈಲ್ವೆ ಇಲಾಖೆ ಅಧಿಕಾರಿಗಳು ಈ ಮನವಿಗೆ ಸ್ಪಂದಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ವಿಶ್ವನಾಥ ಖಾನಾಪೂರ, ಜಗದೀಶ್ ಕಂಗೂರಿ, ಸಿದ್ದಪ್ಪ, ಕೊಟ್ರೇಶ್ ಯಾಳಗಿಶೆಟ್ರರ್, ವೆಂಕಟೇಶ ಕಬಾಡಿ ಅವರು ಆಗ್ರಹಿಸಿದ್ದಾರೆ.



"ಹುಬ್ಬಳ್ಳಿ-ಬೆಂಗಳೂರು ರೈಲು ಕುಷ್ಟಗಿವರೆಗೆ ವಿಸ್ತರಿಸಿದರೆ ಈ ಭಾಗದ ಸಾವಿರಾರು ಪ್ರಯಾಣಿಕರಿಗೆ ದೊಡ್ಡ ಅನುಕೂಲವಾಗಲಿದೆ. ರೈಲ್ವೆ ಇಲಾಖೆ ತಕ್ಷಣ ಕ್ರಮ ಕೈಗೊಳ್ಳಬೇಕು."

– **ವಿಶ್ವನಾಥ ಖಾನಾಪೂರ**, ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

### ಪೇಠಾ ಆಲೂರಿನಲ್ಲಿ ರೂ.9 ಕೋಟಿ ರಸ್ತೆ ಕಾಮಗಾರಿಗೆ ಶಾಸಕ ಜಿ.ಎಸ್ ಪಾಟೀಲ ಭೂಮಿ ಪೂಜೆ

# ನೀರಾವರಿ ಸದುಪಯೋಗದಿಂದ ರೈತರಿಗೆ ಆರ್ಥಿಕ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಡಂಬಳ

"ನೀರಾವರಿ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಬೆಳೆ ಬೆಳೆದು ರೈತರು ಆರ್ಥಿಕವಾಗಿ ಸದೃಢರಾಗಬೇಕು" ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪೇಠಾಆಲೂರು ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ಹಾಗೂ ಪವರ್ ಗ್ರಿಡ್ ಕಾರ್ಪೋರೇಶನ್ ಆಫ್ ಇಂಡಿಯಾ ಲಿಮಿಟೆಡ್ ವತಿಯಿಂದ ಕೆಸಿಆರ್ ನಿಧಿಯಲ್ಲಿ ಮಂಜೂರಾದ ರೂ. 9 ಕೋಟಿ ವೆಚ್ಚದ ಮೇವುಂಡಿ-ಪೇಠಾ ಆಲೂರು-ಹಳ್ಳಿಗುಡಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಹುಲಿಗುಡ್ಡ ಏತ ನೀರಾವರಿ ಯೋಜನೆಯಡಿ ಪೈಪ್ಲೈನ್ ಮೂಲಕ ಪೇಠಾಆಲೂರು ಕೆರೆಯನ್ನು ತುಂಬಿಸಲಾಗಿದ್ದು, ರೂ 2 ಕೋಟಿ ಅನುದಾನದಲ್ಲಿ ಕಾಲುವೆ ಕಾಮಗಾರಿಗಳು ಅಂತಿಮ ಹಂತದಲ್ಲಿವೆ. ಇದರ ಪ್ರಯೋಜನ ಪಡೆದುಕೊಂಡು ರೈತರು ಉತ್ತಮ ಬೆಳೆ ಪಡೆದು ಆರ್ಥಿಕವಾಗಿ ಬಲಿಷ್ಠರಾಗಬೇಕು ಎಂದು ಹೇಳಿದರು.

ಈ ರಸ್ತೆ ಕಾಮಗಾರಿ ಹಳೆಯ 3.5 ಮೀಟರ್ ಅಗಲದಿಂದ 5.5 ಮೀಟರ್ ಅಗಲಕ್ಕೆ ವಿಸ್ತರಿಸಲಾಗುತ್ತಿದ್ದು,



ರೈತರು ತಮ್ಮ ಜಮೀನುಗಳಿಗೆ ಸುಲಭವಾಗಿ ಸಂಚರಿಸಲು ಅನುಕೂಲವಾಗಲಿದೆ ಎಂದು ಅವರು ತಿಳಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಮೂಲಕ ಗ್ರಾಮಾಭಿವೃದ್ಧಿಗೆ ಉತ್ತಮ ಅವಕಾಶ ದೊರಕುತ್ತಿತ್ತು. ಆದರೆ ಅದರ ಹೆಸರನ್ನು ಬದಲಿಸಲು ಮುಂದಾದ ಸರ್ಕಾರದ ವಿರುದ್ಧ ಜನರಲ್ಲಿ ಅಸಮಾಧಾನ ವ್ಯಕ್ತವಾಗಿದೆ ಎಂದು ಅವರು ಟೀಕಿಸಿದರು.

ಡಿ.ಡಿ. ಮೋರನಾಳ ಮಾತನಾಡಿ, ದೇಶದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ಕೊಡುಗೆ ಮಹತ್ವದ್ದಾಗಿದೆ ಎಂದು ಹೇಳಿದರು.

ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಯಲ್ಲಪ್ಪಗೌಡ ಕರಮುಡಿ ಮಾತನಾಡಿ, ಪೈಪ್ ಲೈನ್ ಮೂಲಕ ಕೆರೆಗೆ ನೀರು, ರೂ 2 ಕೋಟಿ ಕಾಲುವೆ ಅಭಿವೃದ್ಧಿ, ರೂ 20 ಲಕ್ಷದಲ್ಲಿ ಶಾಲಾ ಕಟ್ಟಡ ಸೌಂದರ್ಯೀಕರಣ ಹಾಗೂ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಇವೆಲ್ಲವೂ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ವೇಳೆ ರೈತರು "ಹುಲಿ ನಮ್ಮ ಹುಲಿ" ಎಂದು ಘೋಷಣೆ ಕೂಗಿ ಶಾಸಕ ಪಾಟೀಲರನ್ನು ಸ್ವಾಗತಿಸಿದ್ದು ವಿಶೇಷವಾಗಿ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಶರಣು ಬಂಡಿಹಾಳ, ಕಾರ್ಯನಿರ್ವಾಹಕ ಅಭಿಯಂತರ ಉಮೇಶ್ ನಾಯಕ, ಎಸ್.ಎಂ. ನಾಯಕ, ಸಂತೋಷ ಹಿರೇಮಠ, ಎಂ.ಎನ್. ದಾಯಮ್ಮನವರ, ತಾಲೂಕು ಇಓ ವಿಶ್ವನಾಥ ಹೊಸಮನಿ, ತೋಟಗಾರಿಕಾ ಅಧಿಕಾರಿ ಮಹಮ್ಮದರಫೀಕ್ ತಾಂಬೋಟಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

"ನೀರಾವರಿ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಗ್ರಾಮೀಣ ಜೀವನದ ಬದಲಾವಣೆಗೆ ಮುಖ್ಯ ಆಧಾರ"

**– ಜಿ.ಎಸ್. ಪಾಟೀಲ, ಶಾಸಕ**

# ಬಾಕಿ ಪ್ರಕರಣಗಳಿಗೆ ಸುಪ್ರೀಂ ಕೋರ್ಟ್ ಮಹತ್ವದ ಹೆಜ್ಜೆ

▶▶ಮೊದಲನೇ ಪುಟದಿಂದ

ಪ್ರಸ್ತುತ ಸುಪ್ರೀಂ ಕೋರ್ಟ್ ಬ್ಯಾಂಕಿಂಗ್ ಮತ್ತು ವಿಮಾ ಸಂಬಂಧಿತ ಪ್ರಕರಣಗಳು, ನಾಗರೀಕ ವ್ಯಾಜ್ಯಗಳು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ಗ್ರಾಹಕ ವ್ಯಾಜ್ಯಗಳು, ರೇರಾ, ಕ್ರಿಮಿನಲ್ ಪ್ರಕರಣಗಳು, ಕೌಟುಂಬಿಕ ವಿವಾದಗಳು, ಕಾರ್ಮಿಕ ಮತ್ತು ಕೈಗಾರಿಕಾ ಕಾನೂನುಗಳು, ಭೂಸ್ವಾಧೀನ ಮತ್ತು ಪುನರ್ವಸತಿ, ಆಸ್ತಿ ತೆರಿಗೆ, ಬಾಡಿಗೆ ನಿಯಂತ್ರಣ ಹಾಗೂ ಸಾರ್ವಜನಿಕ ಆವರಣ ಕಾಯ್ದೆ, ವರ್ಗಾವಣೆ ಅರ್ಜಿಗಳು ಮತ್ತು ಸೇವಾ ಕಾನೂನುಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಇತ್ಯರ್ಥಕ್ಕೆ ಗುರುತಿಸಿದೆ.

ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು 4,328 ಪ್ರಕರಣಗಳಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಅತಿ ಹೆಚ್ಚು 1,245 ಪ್ರಕರಣಗಳಿದ್ದು, ಬೆಳಗಾವಿ 517, ಕಲಬುರಗಿ 269, ವಿಜಯಪುರ 213, ಧಾರವಾಡ 188, ಬಾಗಲಕೋಟೆ 159, ಗದಗ 125, ಬಳ್ಳಾರಿ 109, ತುಮಕೂರು 101, ಕೊಪ್ಪಳ 98, ಹಾವೇರಿ 81, ಉಡುಪಿ 78, ಬೀದರ್ 77, ದಕ್ಷಿಣ ಕನ್ನಡ 75, ಶಿವಮೊಗ್ಗ 69, ರಾಯಚೂರು 69, ಚಿತ್ರದುರ್ಗ 58, ಮೈಸೂರು 56, ದಾವಣಗೆರೆ 47, ಉತ್ತರ ಕನ್ನಡ 35, ಮಂಡ್ಯ 30, ಚಿಕ್ಕಮಗಳೂರು 27, ಹಾಸನ 24, ಬೆಂಗಳೂರು ಗ್ರಾಮಾಂತರ 18, ರಾಮನಗರ 17, ಚಿಕ್ಕಬಳ್ಳಾಪುರ 17, ಕೊಡಗು 15, ಯಾದಗಿರಿ 14 ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ 4 ಪ್ರಕರಣಗಳು ಸೇರಿವೆ.

ಇದಲ್ಲದೆ ಕರ್ನಾಟಕದ ಹೊರಗಿನ 36 ಪ್ರಕರಣಗಳು ಹಾಗೂ ಸರಿಯಾಗಿ ಗುರುತಿಸಲಾಗದ 347 ಪ್ರಕರಣಗಳೂ ಸೇರಿವೆ. ಗುರುತಿಸಲಾದ ಪ್ರಕರಣಗಳಲ್ಲಿ 937ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಸರ್ಕಾರವೇ ಪಕ್ಷವಾಗಿದ್ದು, ಇವುಗಳ ಇತ್ಯರ್ಥಕ್ಕೆ ರಾಜ್ಯ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸುವಂತೆ ಅಡ್ವಕೇಟ್ ಜನರಲ್ ಅವರೊಂದಿಗೆ ಸಮಾಲೋಚನೆ ನಡೆಸಲಾಗಿದೆ.

ಈ ಕುರಿತು ಮಾತನಾಡಿದ ಆರ್ ದೇವದಾಸ್ ಅವರು, ಈ ವಿಶೇಷ ಲೋಕ ಅದಾಲತ್ ಜನಸಾಮಾನ್ಯರಿಗೆ ಕಡಿಮೆ ವೆಚ್ಚದಲ್ಲಿ ಮತ್ತು ತ್ವರಿತವಾಗಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಮಹತ್ವದ ಅವಕಾಶವಾಗಿದ್ದು, ಸಮಯ ಮತ್ತು ಹಣ ಉಳಿತಾಯವಾಗುವುದರ ಜೊತೆಗೆ ಉಭಯ ಪಕ್ಷಗಳ ನಡುವೆ ಸೌಹಾರ್ದ ಸಂಬಂಧ ಉಳಿಯಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

**ಸಂಪರ್ಕ ವಿವರಗಳು**

ಸರ್ವೋಚ್ಚ ನ್ಯಾಯಾಲಯ ಒನ್ ಸ್ಟಾಪ್ ಸೆಂಟರ್: 011-23112428, 011-23112528

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ: 011-23382778 । ಟೋಲ್ ಫ್ರೀ: 15100

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ: 080-22111729, 080-22111714

ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿ, ಬೆಂಗಳೂರು: 080-22869988

# 'ನಾರಿ ಶಕ್ತಿ ವಂದನಾ ಅಧಿನಿಯಮ' ಬೆಂಬಲಿಸಿ ಪ್ರತಿಭಟನೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆಯಲ್ಲಿ 33% ಮಹಿಳಾ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿದ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳ ವಿರುದ್ಧ ಮೇ 1, 2026ರಂದು ಮಧ್ಯಾಹ್ನ 3 ಗಂಟೆಗೆ ಹುಬ್ಬಳ್ಳಿಯ ನೆಹರು ಮೈದಾನದಲ್ಲಿ ನಡೆಯಲಿರುವ ಬೃಹತ್ ಪ್ರತಿಭಟನೆಯ ನಿಮಿತ್ತ ಗದಗ ಜಿಲ್ಲಾ ಬಿಜೆಪಿ ವತಿಯಿಂದ ಪೂರ್ವಭಾವಿ ಸಭೆ ನಡೆಯಿತು.

ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಶಾಸಕರಾದ ಸಿ.ಸಿ. ಪಾಟೀಲ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಪ್ರತಿಭಟನೆಯ ಸಿದ್ಧತೆಗಳ ಕುರಿತು ಚರ್ಚೆ ನಡೆಸಲಾಯಿತು.




ಈ ಸಂದರ್ಭದಲ್ಲಿ ಶಾಸಕರಾದ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಉಪಸ್ಥಿತರಿದ್ದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ ಪಾಟೀಲ, ಪಕ್ಕಿರೇಶ ರಟ್ಟಿಹಳ್ಳಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ ಸೇರಿದಂತೆ ಒಂಬತ್ತು ಮಂಡಲಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮೋರ್ಚಾ ಪದಾಧಿಕಾರಿಗಳು ಹಾಗೂ ಹಲವಾರು ಪಕ್ಷದ ಮುಖಂಡರು ಸಭೆಯಲ್ಲಿ ಭಾಗವಹಿಸಿದ್ದರು.

### ಉಚಿತ ವೈದಿಕ ಸಂಸ್ಕಾರ ಶಿಬಿರ

# ಯುವಕರಿಗೆ ಸಂಸ್ಕಾರ-ಮೌಲ್ಯಗಳ ಪಾಠ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಸಾಗರ 2 ಗ್ರಾಮದಲ್ಲಿರುವ ಶ್ರೀ ಸದ್ಗುರು ಮಹಾದೇವ ತಾತನವರ ಉಘಾಮಠದಲ್ಲಿ ಷಬ್ರ. ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿಗಳ ನೇತೃತ್ವದಲ್ಲಿ ಉಚಿತ ವೈದಿಕ ಸಂಸ್ಕಾರ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಒಂದು ತಿಂಗಳ ಕಾಲ ನಡೆಯುತ್ತಿರುವ ಈ ಶಿಬಿರದಲ್ಲಿ 70ಕ್ಕೂ ಹೆಚ್ಚು ಶಿಬಿರಾರ್ಥಿಗಳಿಗೆ ಪೂಜಾ ವಿಧಾನ, ಮಂತ್ರಪಠಣ, ಆಚಾರ ವಿಚಾರಗಳ ಸಂಸ್ಕಾರ ಹಾಗೂ ಮಾನವೀಯ ಮೌಲ್ಯಗಳನ್ನು ಬೋಧಿಸಲಾಗುತ್ತಿದೆ.

ಶಿಬಿರಾರ್ಥಿಗಳಿಗೆ ಪರಿಸರ ಮಿತ್ರ



ಗ್ರಾಮೀಣ ಶಿಕ್ಷಣ ಮತ್ತು ಸಾಮಾಜಿಕ ಟ್ರಸ್ಟ್ ಹಾಗೂ ಹಸಿರು ಸ್ನೇಹ ಬಳಗದ ವತಿಯಿಂದ ನೋಟ್‌ಬುಕ್ ಮತ್ತು ಪೆನ್‌ಗಳ ವಿತರಣಾ ಕಾರ್ಯಕ್ರಮವೂ ನಡೆಯಿತು.

ಕಾರ್ಯಕ್ರಮದ ಸಾನಿಧ್ಯವನ್ನು ಸ್ವಾಮೀಜಿಗಳು ವಹಿಸಿ ಆಶೀರ್ವಚನ ನೀಡಿದರು. ಶಿಬಿರದ ತರಬೇತುದಾರರಾದ ಸಿ.ಎಂ. ವಿನಯ್ ಶಾಸ್ತ್ರಿ, ಎ. ನಂಜುಂಡಪ್ಪ, ಕೊಟ್ರಯ್ಯ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷೆ ಮಮತಾ ಟಿ., ಹಸಿರು ಸ್ನೇಹ ಬಳಗದ ಟಿ. ಗುರುಬಸವರಾಜ, ಬಿ. ಚಂದ್ರು, ನಟರಾಜ್ ಕೆ., ವಿ.ಎಚ್.ಎಂ ಮಹೇಶ್, ಕೊಟ್ರೇಶ್ ಎಂ., ಪಿ. ಸಿದ್ದೇಶ್, ಕೊಟ್ರೇಶ್ ಪಿ., ಸಿದ್ದೇಶ್ ವಿ.ಎಚ್.ಎಂ, ಶಿವರಾಜ್, ಸಂತೋಷ್ ಎಸ್.ಎಸ್., ಅಜಯ್, ಲೋಕೇಶ್, ಸಂಗಮೇಶ್, ದೊಡ್ಡ ಬಸಪ್ಪ ಮಾರುತಿ, ಶಶಿಕುಮಾರ್, ಕರಿಬಸವೇಶ್ವರ ಸ್ವಾಮಿ ಹಾಗೂ ಟ್ರಸ್ಟ್ ಕಾರ್ಯದರ್ಶಿ ವಿನಾಯಕ ಎಂ.ಎಂ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಮುಖ್ಯ ಚುನಾವಣಾ ಆಯುಕ್ತ ಡಾ. ಎಸ್. ಜಿ. ಸಂಗ್ರೇಶಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ರಾಂತ ಜಿಲ್ಲಾ ನ್ಯಾಯಾಧೀಶರೂ ಹಾಗೂ ಕರ್ನಾಟಕ ರಾಜ್ಯ ಮುಖ್ಯ ಚುನಾವಣಾ ಆಯುಕ್ತರೂ ಆಗಿರುವ ಡಾ. ಎಸ್. ಜಿ. ಸಂಗ್ರೇಶಿಯವರಿಗೆ ಗಜೇಂದ್ರಗಡದ ಮಕಾನದಾರ ಸಾಹಿತ್ಯ ಪ್ರತಿಷ್ಠಾನ ಮತ್ತು ನಿರಂತರ ಪ್ರಕಾಶನ, ಗದಗ ಆಶ್ರಯದಲ್ಲಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಇತ್ತೀಚೆಗೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ತಾವರಚಂದ ಗೆಹಲೋತ್ ಅವರಿಂದ ಗೌರವ ಡಾಕ್ಟರೇಟ್ ಪ್ರಶಸ್ತಿಗೆ ಭಾಜನರಾದ ಹಿನ್ನೆಲೆಯಲ್ಲಿ ಈ ಗೌರವ ಸಮರ್ಪಣೆ ನಡೆಯಿತು. ಕಾರ್ಯಕ್ರಮವನ್ನು ಕರ್ನಾಟಕ ಪುಸ್ತಕ ಪ್ರಾಧಿಕಾರದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಜಿಲ್ಲಾ ಸಂಚಾಲಕ ಹಾಗೂ ಹಿರಿಯ ಸಾಹಿತಿ ಎ. ಎಸ್. ಮಕಾನದಾರ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಎಸ್. ಜಿ. ಸಂಗ್ರೇಶಿಯವರ ವೃತ್ತಿಜೀವನ, ಸಾಧನೆಗಳು ಹಾಗೂ ಜೀವನಪಯಣದ ಕುರಿತಾಗಿ ಮೆಲಕು ಹಾಕಲಾಯಿತು. ಅವರ ಏರಿಳಿತಗಳು, ಎದುರಿಸಿದ ಸವಾಲುಗಳು ಹಾಗೂ ಕುಟುಂಬದ ಸಹಕಾರವನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಸಂಗ್ರೇಶಿಯವರು, ಪ್ರಾಮಾಣಿಕ ದುಡಿಮೆ, ನಿಷ್ಕಲ್ಮಶ ವ್ಯಕ್ತಿತ್ವ ಮತ್ತು ನೆಮ್ಮದಿಯ ಜೀವನವೇ ಯಶಸ್ಸಿನ ಮೂಲಮಂತ್ರಗಳು. ಬೆಳವಣಿಗೆ ಎಂದರೆ ಹೊರಗಿನ ಆತಂಕಗಳನ್ನು ಗೆಲ್ಲುವುದು ಮಾತ್ರವಲ್ಲ, ಒಳಗಿನ ಸ್ಥಿತಿಯನ್ನು ನಿಧಾನವಾಗಿ ಪರಿವರ್ತಿಸುವುದೂ ಆಗಿದೆ ಎಂದು ಹೇಳಿದರು. ಹೊಸದನ್ನು ಹುಡುಕುವ ಮನಸ್ಸೇ ಸೃಷ್ಟಿಯ ಆರಂಭವಾಗಿದ್ದು, ಪ್ರಯತ್ನವೇ ಗೆಲುವಿನ ಹೆಜ್ಜೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಂಜುನಾಥ ಮೇಟಿ, ಬಷೀರ್ ಅಹ್ಮದ್ ಕೊಲ್ಕಾರ್, ಮಲ್ಲಿಕಾರ್ಜುನ, ಡಾ. ಎಸ್. ಟಿ. ಸೋಮಶೇಖರ್, ಶಫಿ ವುಲ್ಲಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮದುವೆಯ ದುಂದು ವೆಚ್ಚಕ್ಕೆ ತಡೆ; ಮದ್ಯಪಾನ ಸೇವನೆ, ಡಿಜೆಗೂ ಸಂಪೂರ್ಣ ನಿಷೇಧ
### ಗಜೇಂದ್ರಗಡ ತಾಲ್ಲೂಕಿನ 17 ತಾಂಡಾದ ಹಿರಿಯರಿಂದ ಐತಿಹಾಸಿಕ ನಿರ್ಧಾರ

# ವರದಕ್ಷಿಣೆಗೆ ಕಡಿವಾಣ ಹಾಕಿದ ಬಂಜಾರ ಸಮಾಜ!

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಮಾಜದಲ್ಲಿ ವರ್ಷಗಳಿಂದ ಬೇರೂರಿರುವ ವರದಕ್ಷಿಣೆ ಪಿಡುಗಿಗೆ ಕಡಿವಾಣ ಹಾಕುವ ದಿಟ್ಟ ಹೆಜ್ಜೆಯನ್ನು ಬಂಜಾರ ಸಮಾಜ ಇಟ್ಟಿದ್ದು, ಇತರ ಎಲ್ಲಾ ಸಮಾಜಗಳಿಗೆ ಮಾದರಿಯಾಗಿದೆ. ವರದಕ್ಷಿಣೆಯಿಂದ ಮಹಿಳೆಯರು ಹಾಗೂ ಹೆಣ್ಣು ಹೆತ್ತವರು ಅನುಭವಿಸುತ್ತಿರುವ ಶೋಷಣೆಯನ್ನು ಮನಗಂಡು, ಗಜೇಂದ್ರಗಡ ತಾಲ್ಲೂಕಿನ 17 ತಾಂಡಾದ ಹಿರಿಯರು ಸಮಾಜಮುಖಿ ನಿರ್ಧಾರ ಕೈಗೊಂಡಿದ್ದಾರೆ.

ವರದಕ್ಷಿಣೆ ನಿಷೇಧ ಕಾಯ್ದೆ ಜಾರಿಯಲ್ಲಿದ್ದರೂ ಪರಿಣಾಮಕಾರಿ ಅನುಷ್ಠಾನ ಕಾಣದ ಹಿನ್ನೆಲೆಯಲ್ಲಿ, ಇತ್ತೀಚೆಗೆ ಬಂಗಾರದ ಬೆಲೆ 10 ಗ್ರಾಂಗೆ ರೂ. 2 ಲಕ್ಷದವರೆಗೆ ಏರಿಕೆಯಾದುದು ಮದುವೆ ವೆಚ್ಚವನ್ನು ಮತ್ತಷ್ಟು ಭಾರಿಯಾಗಿಸಿದೆ. ಇದರಿಂದ ಹೆಣ್ಣು ಹೆತ್ತವರು ಆತಂಕಕ್ಕೊಳಗಾಗಿದ್ದ ಪರಿಸ್ಥಿತಿಯಲ್ಲಿ, ಬಂಜಾರ ಸಮಾಜದ ಹಿರಿಯರು ಈ ಪಿಡುಗನ್ನು ನಿಯಂತ್ರಿಸಲು ಮುಂದಾಗಿದ್ದಾರೆ.

ದಕ್ಷಿಣಕಾಶಿ ಕಾಲಕಾಲೇಶ್ವರ ದೇವಸ್ಥಾನದ ಆವರಣದಲ್ಲಿ ಬುಧವಾರ ನಡೆದ ಸಭೆಯಲ್ಲಿ 17 ತಾಂಡಾದ ನಾಯಕರು, ಕಾರಬಾರಿ, ಡಾವ್, ಗುರುಹಿರಿಯರು ಹಾಗೂ ಯುವಕರು ಭಾಗವಹಿಸಿದರು.

**ಅಂತ್ಯಸಂಸ್ಕಾರದಲ್ಲೂ ಬದಲಾವಣೆ**

"ಹಾಡ್ ಬಕರಾ" ಎಂಬ ಮೂರು ದಿನದ ಮಾಂಸಾಹಾರಿ ಊಟದ ಆಚರಣೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. ದುಃಖದ ಸಂದರ್ಭದಲ್ಲಿ ಪ್ರಾಣಿಬಲಿ ನೀಡದೆ, ಕುಟುಂಬಕ್ಕೆ ಸಾಂತ್ವಾನ ಹೇಳುವುದು ಮತ್ತು ಧೈರ್ಯ ತುಂಬುವುದು ಮಾತ್ರ ಪಾಲಿಸಬೇಕಾದ ಸಂಪ್ರದಾಯ ಎಂದು ತೀರ್ಮಾನಿಸಲಾಯಿತು.



ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ನಡೆದ ಸಭೆಯಲ್ಲಿ ಎಲ್ಲಾ ತಾಂಡಾದ ಪ್ರತಿನಿಧಿಗಳ ಅಭಿಪ್ರಾಯಗಳನ್ನು ಪಡೆದು, ಸಾಧಕ-ಬಾಧಕಗಳ ಕುರಿತು ಚರ್ಚಿಸಿ ಅಂತಿಮವಾಗಿ ಅನಿಷ್ಟ ಪದ್ಧತಿಗಳನ್ನು ನಿಷೇಧಿಸುವ ನಿರ್ಧಾರ ಪ್ರಕಟಿಸಿ ಠರಾವು ಪಾಸ್ ಮಾಡಲಾಯಿತು.

ಸಭೆಯಲ್ಲಿ ಗಜೇಂದ್ರಗಡ ತಾಂಡಾದ ಸುರೇಶ ಸಿ. ರಾಠೋಡ, ಯಮನಪ್ಪ ಎಸ್. ರಾಠೋಡ, ಮನ್ನುನಾಯಕ ಡಿ. ರಾಠೋಡ, ದುರಗಪ್ಪ ಮಾಳೋತ್ತರ, ಶಿವಪುತ್ರಪ್ಪ ಡಿ. ಮಾಳೋತ್ತರ, ಗೋವಿಂದಪ್ಪ ಗುಗಲೊತ್ತರ, ರಾಜೂರ ತಾಂಡಾದ ತುಕ್ಕಪ್ಪ ರಾಠೋಡ, ಪಡಿಯಪ್ಪ ಚವ್ಹಾಣ, ದಿಂಡೂರ ತಾಂಡಾದ ಎಸ್. ಎಸ್. ಲಮಾಣಿ, ಲಕ್ಕಲಕಟ್ಟಿ ತಾಂಡಾದ ಭೀಮಪ್ಪ ನಾಯಕ, ಭೈರಾಪುರ ತಾಂಡಾದ ಲಕ್ಷ್ಮಣ ರಾಠೋಡ, ಜನತಾ ಪ್ಲಾಟ್ ತಾಂಡಾದ ಕೃಷ್ಣಪ್ಪ ರಾಠೋಡ, ನಾರಾಯಣಪ್ಪ ಮಾಳೋತ್ತರ, ನೆಲ್ಲೂರು ತಾಂಡಾದ ಶಾಂತಪ್ಪ ರಾಠೋಡ, ಶರಣಪ್ಪ ಲಮಾಣಿ, ಸರ್ಜಾಪುರ ತಾಂಡಾದ ಮಹಾಂತೇಶ ರಾಠೋಡ, ಚಂದ್ರು ಕಾರಬಾರಿ, ಶಂಕ್ರಪ್ಪ ನಾಯಕ,

> "ವರದಕ್ಷಿಣೆ ಮತ್ತು ದುಂದು ವೆಚ್ಚಗಳು ಬಡ ಕುಟುಂಬಗಳ ಮೇಲೆ ಭಾರಿಯಾಗುತ್ತಿವೆ. ಸರಳತೆ, ಸಮಾನತೆ ಉಳಿಸಲು ನಾವು ಕೈಗೊಂಡ ಈ ನಿರ್ಧಾರವನ್ನು ಎಲ್ಲರೂ ಕಟ್ಟುನಿಟ್ಟಾಗಿ ಪಾಲಿಸಬೇಕು."
> – ಬಂಜಾರ ಸಮಾಜದ ಹಿರಿಯರು

ಪೋಮಪ್ಪ ಕಾರಬಾರಿ, ರುದ್ರಾಪುರ ತಾಂಡಾದ ಎಂ. ವೈ. ಮಾಳೋತ್ತರ, ತುಕ್ಕಪ್ಪ ರಾಠೋಡ, ನೇಮಪ್ಪ ಮಾಳೋತ್ತರ, ಅಮರಗಟ್ಟಿ ತಾಂಡಾದ ಸಕ್ರಪ್ಪ ರಾಠೋಡ, ಕೊಡಗಾನೂರ ತಾಂಡಾದ ಕಮಲಪ್ಪ ರಾಠೋಡ, ದುರ್ಗಪ್ಪ ಮಾಳೋತ್ತರ, ಬೆಣಚಮಟ್ಟಿ ತಾಂಡಾದ ಪುಂಡಲೀಕ ನಾಯಕ, ಕಾಂತಪ್ಪ ಕಾರಬಾರಿ, ನಾಗರಸಕೊಪ್ಪ ತಾಂಡಾದ ರಾಮಪ್ಪ ರಾಠೋಡ, ಶರಣಪ್ಪ ಮಾಳೋತ್ತರ, ಗೌಡಗೇರಿ ತಾಂಡಾದ ಕುಮಾರ ರಾಠೋಡ, ಯಮನಪ್ಪ ಮಾಳೋತ್ತರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಪ್ರಮುಖ ನಿರ್ಧಾರಗಳು**

1. ವರದಕ್ಷಿಣೆ ಕೊಡುವುದು ಹಾಗೂ ಸ್ವೀಕರಿಸುವುದಕ್ಕೆ ಸಂಪೂರ್ಣ ಕಡಿವಾಣ
2. ಮದುವೆ ದುಂದು ವೆಚ್ಚ, ಭರ್ಜರಿ ಊಟೋಪಚಾರಕ್ಕೆ ತಡೆ
3. ಮದ್ಯಪಾನ ಸೇವನೆ, ಡಿಜೆ ಸಂಪೂರ್ಣ ನಿಷೇಧ
4. ಮದುವೆ ಮೆರವಣಿಗೆಯಲ್ಲಿ ಗರಿಷ್ಠ 21 ಜನರಿಗೆ ಮಾತ್ರ ಅವಕಾಶ
5. ಮದುಮಗಳಿಗೆ ಅಗತ್ಯ ಗೃಹೋಪಯೋಗಿ ಸಾಮಗ್ರಿಗಳನ್ನು ಮಾತ್ರ ನೀಡುವ ನಿಯಮ
6. ಹೆಣ್ಣಿನ ಮನೆಯಲ್ಲಿ ಮದುವೆ ನಡೆದರೆ ಖರ್ಚು ಅರ್ಧ-ಅರ್ಧ ಹಂಚಿಕೆ
7. ತಾಳಿಯಲ್ಲಿ ಗರಿಷ್ಠ 5 ಗ್ರಾಂ ಮಿತಿ; ಗಂಡು-ಹೆಣ್ಣು ಕಡೆಯವರು ತಲಾ ಒಂದು ತಾಳಿ
8. ಸಂಪ್ರದಾಯದಂತೆ ಬಳೆಗಳನ್ನು ಮಾತ್ರ ನೀಡಲು ಅವಕಾಶ

ಸಭೆಯ ಅಂತ್ಯದಲ್ಲಿ ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದಾಗಿ ಘೋಷಿಸಲಾಗಿದ್ದು, ಇತರ ತಾಂಡಾಗಳೊಂದಿಗೆ ಸಂಬಂಧ ಬೆಳೆಸುವಾಗಲೂ ಇದೇ ನಿಯಮ ಪಾಲನೆ ಕಡ್ಡಾಯ ಎಂದು ಸ್ಪಷ್ಟಪಡಿಸಲಾಯಿತು. ನಿಯಮ ಉಲ್ಲಂಘಿಸಿದರೆ ಸಮಾಜದ ಹಿರಿಯರು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಲಾಗಿದೆ.

ಬಂಜಾರ ಸಮಾಜದ ಈ ನಿರ್ಧಾರವು ಸಾಮಾಜಿಕ ಸಮಾನತೆ, ಸರಳತೆ ಮತ್ತು ಮಹಿಳಾ ಗೌರವವನ್ನು ಬಲಪಡಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

# ಸರಕಾರಿ ಪ್ರೌಢಶಾಲೆ ಮಾರಡಗಿ ಫಲಿತಾಂಶ ಶೇ. 96.55





■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಲ್ಲಿಯ ಸರಕಾರಿ ಪ್ರೌಢಶಾಲೆ ಮಾರಡಗಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.96.55ರಷ್ಟು ಫಲಿತಾಂಶ ದಾಖಲಾಗಿದೆ.

ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳಲ್ಲಿ ಲಕ್ಷ್ಮಿ ಬಳ್ಳಾರಿ (95.36%), ಸವಿತಾ ಮುಂಡರಗಿ (93.60%) ಹಾಗೂ ಅಶ್ವಿನಿ ಬಡಿಗೇರ (91.52%) ಅಂಕಗಳನ್ನು ಪಡೆದಿದ್ದಾರೆ.

ಶಾಲೆಯ ಈ ಉತ್ತಮ ಫಲಿತಾಂಶಕ್ಕೆ ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ ಹಾಗೂ ಗ್ರಾಮಸ್ಥರು ಸಂತೋಷ ವ್ಯಕ್ತಪಡಿಸಿ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಅವ್ವಾ ಪ್ರತಿಷ್ಠಾನಕ್ಕೆ 'ಕಾಯಕ ರತ್ನ' ರಾಜ್ಯ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಅವ್ವಾ ಸೇವಾ ಪ್ರತಿಷ್ಠಾನ ಸಂಸ್ಥಾಪಕ ಮಂಜುನಾಥ ಮಟ್ಟಿ ಅವರಿಗೆ "ಕಾಯಕ ರತ್ನ" ರಾಜ್ಯ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಾಂಸ್ಕೃತಿಕ ಮತ್ತು ಸಾಹಿತ್ಯಕ ಪರಿಷತ್ತು ರಾಜ್ಯ ಘಟಕ ಬೆಂಗಳೂರು ಹಾಗೂ ಧಾರವಾಡ ಜಿಲ್ಲಾ ಘಟಕಗಳ ಸಂಯುಕ್ತ ಆಶ್ರಯದಲ್ಲಿ ನಡೆದ ರಾಜ್ಯ ಪದಾಧಿಕಾರಿಗಳ ಪದಗ್ರಹಣ ಹಾಗೂ ವಿವಿಧ ರಂಗದ ಸಾಧಕರು ಮತ್ತು ನೌಕರರಿಗೆ ಕಾಯಕ ರತ್ನ ಹಾಗೂ ಅತ್ಯುತ್ತಮ ಸೇವಾ ಸಂಸ್ಥೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ



ಈ ಪ್ರಶಸ್ತಿ ನೀಡಲಾಯಿತು.

ಸಮಾರಂಭದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಮಾಜಿ ಸಂಸದ ಐ.ಜಿ. ಸನದಿ ಅವರು ಉಮಾ ಮಟ್ಟಿ ಅವರಿಗೆ "ಕಾಯಕ ರತ್ನ" ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿ, ನೌಕರರು ಕೇವಲ ತಮ್ಮ ವೃತ್ತಿಗೆ ಸೀಮಿತವಾಗದೇ ಸಾಹಿತ್ಯ, ಸಂಸ್ಕೃತಿ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ನಾಡು-ನುಡಿ ಪ್ರೇಮ ಬೆಳೆಯುತ್ತದೆ. ಸರಕಾರಿ ನೌಕರರ ಸಾಧನೆಗಳನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ, ಮಾಜಿ ಸಂಸದ ಐ.ಜಿ. ಸನದಿ, ಅಖಿಲ ಭಾರತ ಶಿಕ್ಷಕರ ಸಂಘದ ಸಂಘಟನಾ ರಾಷ್ಟ್ರೀಯ ಅಧ್ಯಕ್ಷ ಬಸವರಾಜ ಗುರಿಕಾರ, ಧಾರವಾಡ ಪರಿಸರ ಪ್ರೇಮ ತಂಡದ ಸಂಚಾಲಕ ಎಲ್.ಐ. ಲಕ್ಕಮ್ಮನವರ, ಸರಕಾರಿ ನೌಕರರ ಸಾಂಸ್ಕೃತಿಕ ಸಾಹಿತ್ಯ ಪರಿಷತ್ತು ರಾಜ್ಯ ಅಧ್ಯಕ್ಷ ರಮಾ ಆರ್., ಧಾರವಾಡ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಪ್ರವೀಣಬಾನು ಬುಳ್ಳಣ್ಣವರ, ಸಹಾಯಕ ಪ್ರಾಧ್ಯಾಪಕರು ಕೆ.ವಿ.ಡಿ. ಧಾರವಾಡ ಡಾ. ಭಾರತಿ ಗಾಣಿಗೇರ, ಕರ್ನಾಟಕ ಮಹಿಳಾ ನೌಕರರ ಸಂಘ ಬಿಜಾಪುರ ಲತಾ ಬಿರಾಧಾರ, ಕೆ.ಸಿ. ರಮೇಶ ಬಿಇಒ ನೆಲಮಂಗಲ, ಕೆ.ಎಸ್. ಸುರೇಶ ಬಿಇಓ ಚಳಕೇರಿ, ಶ್ರೀಗಂಧ ಶೇಟ್ ಅಧ್ಯಕ್ಷರು ಕೆಜಿಪಿ ಫೌಂಡೇಶನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಭಾರೀ ಅನುದಾನ, ತಾಯಿ-ಶಿಶು ಮರಣ ಪ್ರಮಾಣ ಇಳಿಕೆ-ಗೃಹ ಆರೋಗ್ಯ ಸೇರಿ ಹಲವು ಯೋಜನೆ ಜಾರಿ: ಅಶೋಕ ಮಂದಾಲಿ


# ಆರೋಗ್ಯ ಕ್ಷೇತ್ರದಲ್ಲಿ ಕಾಂಗ್ರೆಸ್ ಸರಕಾರದ ಮಹತ್ವದ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಸರ್ಕಾರ ಕಳೆದ 2.5 ವರ್ಷಗಳಲ್ಲಿ ಕನ್ನಡಿಗರ ಆರೋಗ್ಯ ಸುಧಾರಣೆಗೆ ಹಲವು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದು, ಉತ್ತಮ ಆರೋಗ್ಯ ಸೇವೆ ಒದಗಿಸುತ್ತಿದೆ ಎಂದು ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2026-27ರ ಬಜೆಟ್‌ನಲ್ಲಿ ಆರೋಗ್ಯ ಕ್ಷೇತ್ರಕ್ಕೆ ರೂ.17,473 ಕೋಟಿ ಮೀಸಲಿಡಲಾಗಿದೆ ಎಂದು ತಿಳಿಸಿದರು. ಇದರೊಂದಿಗೆ ಭಾರತದಲ್ಲಿ ತಲಾ ಆರೋಗ್ಯ ವೆಚ್ಚದಲ್ಲಿ ಕರ್ನಾಟಕ ಮೊದಲ 5 ರಾಜ್ಯಗಳಲ್ಲಿ ಒಂದಾಗಿದೆ ಎಂದು ಹೇಳಿದ್ದಾರೆ.

2021ರಲ್ಲಿ ಶೇ.17ರಷ್ಟಿದ್ದ ಶಿಶು ಮರಣ ಪ್ರಮಾಣ 2023ಕ್ಕೆ ಶೇ.14ಕ್ಕೆ ಇಳಿಕೆಯಾಗಿದೆ. ತಾಯಿ ಮರಣ ಪ್ರಮಾಣ ತಡೆಗಟ್ಟಲು ರೂ. 320 ಕೋಟಿ ಅನುದಾನ ನೀಡಲಾಗಿದೆ.



'ಲಕ್ಷ್ಯ' ಕಾರ್ಯಕ್ರಮದಡಿ ಹೆರಿಗೆ ಕೊಠಡಿಗಳು, ಮಾತೃತ್ವ ಐಸಿಯು ಮತ್ತು ಶಸ್ತ್ರಚಿಕಿತ್ಸಾ ಕೊಠಡಿಗಳ ಗುಣಮಟ್ಟ ಸುಧಾರಿಸಲಾಗಿದೆ.

ನವಜಾತ ಶಿಶುಗಳ ಮರಣ ಪ್ರಮಾಣ ಕಡಿಮೆ ಮಾಡಲು 11 ತಾಯಿ ಎದೆ ಹಾಲಿನ ಸಮಗ್ರ ನಿರ್ವಹಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 2030ರೊಳಗೆ ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಒಂದಂಕಿಗೆ ತರಲು ಸರ್ಕಾರ ಪಣತೊಟ್ಟಿದೆ ಎಂದು ತಿಳಿಸಿದ್ದಾರೆ.

ತಾಯಿ-ಶಿಶು ಸಾವಿನ ಪ್ರಮಾಣ ಕಡಿಮೆ ಮಾಡಲು 148 ತಾಲೂಕು ಆಸ್ಪತ್ರೆಗಳಲ್ಲಿ

> "ಕಾಂಗ್ರೆಸ್ ಸರ್ಕಾರ ಕನ್ನಡಿಗರ ಆರೋಗ್ಯ ಸುಧಾರಣೆಗೆ ದಿಟ್ಟ ಹೆಜ್ಜೆ ಇಟ್ಟಿದ್ದು, ನಗರದಿಂದ ಗ್ರಾಮೀಣ ಮಟ್ಟದವರೆಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಬದ್ಧವಾಗಿದೆ."
> – **ಅಶೋಕ ಮಂದಾಲಿ,** ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷರು

24 ಗಂಟೆಗಳೂ ಸ್ತ್ರೀರೋಗ, ಅರಿವಳಿಕೆ ಮತ್ತು ಮಕ್ಕಳ ತಜ್ಞರನ್ನು ಲಭ್ಯವಾಗುವಂತೆ ಮಾಡಲಾಗಿದೆ. ತುರ್ತು ಆರೋಗ್ಯ ಸೇವೆಯಾದ 108 ಅಂಬುಲೆನ್ಸ್ ಸೇವೆಯನ್ನು ಸರ್ಕಾರದ ಆರೋಗ್ಯ ಇಲಾಖೆಯಡಿ ನಿರ್ವಹಣೆ ಮಾಡಲಾಗುತ್ತಿದೆ.

ಬೆಂಗಳೂರು ನಗರಕ್ಕೆ ಪ್ರತ್ಯೇಕ ಆರೋಗ್ಯ ನೀತಿ ತರಲು ಸರ್ಕಾರ ನಿರ್ಧರಿಸಿದೆ. ಕಳಪೆ ಔಷಧಿ ಮತ್ತು ಆಹಾರದಲ್ಲಿ ಕೃತಕ ಬಣ್ಣ ಬಳಕೆಯನ್ನು ನಿಷೇಧಿಸಿ ಕ್ರಮ ಕೈಗೊಳ್ಳಲಾಗಿದೆ.

ರೂ, 185 ಕೋಟಿ ವೆಚ್ಚದಲ್ಲಿ "ಗೃಹ ಆರೋಗ್ಯ" ಯೋಜನೆಯಡಿ ಮನೆ-ಮನೆಗೆ ಆರೋಗ್ಯ ತಪಾಸಣೆ ಮಾಡಲಾಗುತ್ತಿದ್ದು, ಮೂರು ಹಂತಗಳಲ್ಲಿ ತಪಾಸಣೆ ನಡೆಯುತ್ತಿದೆ. ಮೊದಲ ಹಂತದಲ್ಲಿ ಆಶಾ ಕಾರ್ಯಕರ್ತೆಯರು ಮತ್ತು ಸಮುದಾಯ ಆರೋಗ್ಯ ಅಧಿಕಾರಿಗಳು ಪ್ರಾಥಮಿಕ ತಪಾಸಣೆ, ಎರಡನೇ ಹಂತದಲ್ಲಿ ರಕ್ತ ಪರೀಕ್ಷೆ, ಇಸಿಜಿ ಮತ್ತು ಔಷಧ ವಿತರಣೆ, ಮೂರನೇ ಹಂತದಲ್ಲಿ ಗಂಭೀರ ಕಾಯಿಲೆ ಪತ್ತೆಯಾದರೆ ಜಿಲ್ಲಾಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡಲಾಗುತ್ತದೆ.

ಈ ಯೋಜನೆಯನ್ನು ಮೊದಲಿಗೆ ಕೋಲಾರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಜಾರಿಗೆ ತಂದ ಬಳಿಕ ರಾಜ್ಯದಾದ್ಯಂತ ವಿಸ್ತರಿಸಲಾಗಿದ್ದು, 7 ಕೋಟಿ ಕನ್ನಡಿಗರ ಆರೋಗ್ಯ ರಕ್ಷಣೆಗೆ ಕ್ರಮ ಕೈಗೊಳ್ಳಲಾಗಿದೆ. ಮುಂದಿನ 2.5 ವರ್ಷಗಳಲ್ಲಿ ತಾಯಿ ಮರಣ ಪ್ರಮಾಣವನ್ನು ಶೇ.64ರಿಂದ 40ಕ್ಕೆ ಇಳಿಸುವ ಗುರಿ ಹೊಂದಲಾಗಿದೆ.

30 ವರ್ಷ ಮೇಲ್ಪಟ್ಟವರಿಗೆ 14 ಸಾಂಕ್ರಾಮಿಕವಲ್ಲದ ಕಾಯಿಲೆಗಳ ತಪಾಸಣೆ ಹಾಗೂ ನಿರ್ವಹಣೆ ಮೂಲಕ ಅಕಾಲಿಕ ಮರಣ ಕಡಿಮೆ ಮಾಡುವ ಯೋಜನೆ ರೂಪಿಸಲಾಗಿದೆ.

ಆರೋಗ್ಯ ಕ್ಷೇತ್ರದಲ್ಲಿ ಖಾಲಿ ಇರುವ 32 ಸಾವಿರ ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದ್ದು, ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ವೈದ್ಯರು ಮತ್ತು ನರ್ಸ್‌ಗಳಿಗೆ ಶೇ.55ರಷ್ಟು ವೇತನ ಪರಿಷ್ಕರಣೆ ಮಾಡಲಾಗಿದೆ.

ರೂ. 413 ಕೋಟಿ ವೆಚ್ಚದಲ್ಲಿ "ಸಮಗ್ರ ಆರೋಗ್ಯ ಯೋಜನೆ" ಜಾರಿಗೊಂಡಿದ್ದು, ರೂ . 650 ಕೋಟಿ ಅನುದಾನದಲ್ಲಿ ತಾಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳ ನವೀಕರಣ ಕೈಗೊಳ್ಳಲಾಗಿದೆ. ರೂ 280 ಕೋಟಿ ವೆಚ್ಚದಲ್ಲಿ ಹಲವು ತಾಲೂಕುಗಳಲ್ಲಿ 100 ಹಾಸಿಗೆಗಳ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ.

262 ಅಂಬುಲೆನ್ಸ್‌ಗಳನ್ನು ಸೇರ್ಪಡೆ ಮಾಡಲಾಗಿದ್ದು, 160 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೊಳಿಸಲಾಗಿದೆ. ಪುನೀತ್ ಹೃದಯ ಜ್ಯೋತಿ ಯೋಜನೆ ಆರಂಭಿಸಿ ಯುವಕರಲ್ಲಿ ಹೃದಯಾಘಾತ ತಡೆಗೆ ಕ್ರಮ ಕೈಗೊಳ್ಳಲಾಗಿದೆ.

ರೂ.187 ಕೋಟಿ ವೆಚ್ಚದಲ್ಲಿ 15 ಜಿಲ್ಲೆಗಳಲ್ಲಿ ಕ್ರಿಟಿಕಲ್ ಕೇರ್ ಬ್ಲಾಕ್ ನಿರ್ಮಾಣ ಕಾರ್ಯ ನಡೆಯುತ್ತಿದೆ. ಗ್ರಾಮೀಣ ಭಾಗದಲ್ಲಿ 24ಥ7 ತುರ್ತು ಸೇವೆಗಾಗಿ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೊಳಿಸಲಾಗುತ್ತಿದೆ.

ರೂ.222.65 ಕೋಟಿ ವೆಚ್ಚದಲ್ಲಿ ಕಲಬುರಗಿಯಲ್ಲಿ 350 ಹಾಸಿಗೆಗಳ ಹೃದ್ರೋಗ ಆಸ್ಪತ್ರೆ ನಿರ್ಮಾಣ ನಡೆಯುತ್ತಿದೆ. ಬೆಂಗಳೂರಿನ ಜಯದೇವ ಆಸ್ಪತ್ರೆಯನ್ನು 1000 ಹಾಸಿಗೆಗಳಿಗೆ ವಿಸ್ತರಿಸಲಾಗಿದೆ.

ಅನಾರೋಗ್ಯಕಾರಿ ಆಹಾರ ಪದಾರ್ಥಗಳಲ್ಲಿ ಕೃತಕ ಬಣ್ಣ ಬಳಕೆಯನ್ನು ನಿಷೇಧಿಸಲಾಗಿದ್ದು, ಗೋಬಿ ಮಂಚೂರಿ, ಕಾಟನ್ ಕ್ಯಾಂಡಿ ಸೇರಿದಂತೆ ಹಲವು ಆಹಾರ ಮಾದರಿಗಳಲ್ಲಿ ಅಸುರಕ್ಷಿತ ಬಣ್ಣ ಪತ್ತೆಯಾಗಿದೆ. ಕಾಟನ್ ಕ್ಯಾಂಡಿಯಲ್ಲಿ ಬಳಸುವ ರೋಡಮೈನ್-ಬಿ ಕ್ಯಾನ್ಸರ್‌ಗೆ ಕಾರಣವಾಗುವ ಅಂಶ ಹೊಂದಿದೆ ಎಂದು ಅಶೋಕ ಮಂದಾಲಿ ತಿಳಿಸಿದ್ದಾರೆ.

# ಸಂಸ್ಕೃತಿ-ಸಂಸ್ಕಾರ ಶಿಬಿರದಲ್ಲಿ ಬಸವ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ದಿನಮಾನದಲ್ಲಿ ಸಮಾಜೋನ್ನತಿಗಾಗಿ ಸರಕಾರ ಮತ್ತು ಸಮಾಜಮುಖಿ ಸಂಘಟನೆಗಳು ನಾನಾ ರೀತಿಯಲ್ಲಿ ವಿವಿಧ ಮುಖವಾಗಿ ಶ್ರಮಿಸುತ್ತಿವೆ. ಆದರೂ ಸಮಾಜದಲ್ಲಿ ಧನಾತ್ಮಕ ಬದಲಾವಣೆ ಮತ್ತು ಸುಧಾರಣೆಯಾಗಲಿ ಕಾಣುತ್ತಿಲ್ಲ, ಗೊಂದಲಗಳು ಮಾತ್ರ ಹೆಚ್ಚುತ್ತಲಿವೆ ಎಂದು ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಹೇಳಿದರು.

ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆ ಹಾಗೂ ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2026 ಇವರ ಸಂಯುಕ್ತ ಆಶ್ರಯದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆದ 21ನೇ ಸಂಸ್ಕೃತಿ□ಸಂಸ್ಕಾರ ಶಿಬಿರದಲ್ಲಿ ಬಸವ ಜಯಂತಿ ಆಚರಣೆಯ ಅಂಗವಾಗಿ ಮಾತನಾಡಿದ ಅವರು, ಗೊಂದಲಗಳು ಇಲ್ಲವಾಗಬೇಕಾದರೆ ವಚನಗಳು ತಿಳಿಸುವ ಕಾಯಕವೇ ಕೈಲಾಸ, ನುಡಿದಂತೆ ನಡೆ, ದಾಸೋಹಂ ಎಂಬ ಬಸವ ತತ್ವಗಳು ಎಲ್ಲರ ಹೃದಯಾಂತರಾಳದಲ್ಲಿ ನೆಲೆಗೊಂಡರೆ ಮಾತ್ರ ನಿಜವಾದ ಸುಖಿ ಸಮಾಜ ನಿರ್ಮಾಣ ಸಾಧ್ಯ ಎಂದರು.

ಮಕ್ಕಳು ಬಾಲ್ಯದಿಂದಲೇ ಶಿವಶರಣರ ವಚನಗಳನ್ನು ಕಂಠಪಾಠ ಮಾಡಿ ದಿನನಿತ್ಯ ಜೀವನದಲ್ಲಿ ಅನುಸರಿಸಿದರೆ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು, ಬಸವಣ್ಣನವರ ವೇಷಧಾರಣೆ ಮಾಡಿದ ಶುಶೃತ ಗುಡಗೂರ ಹಾಗೂ ಶಿಬಿರ ಸಂಯೋಜಕ ಕೆ.ಎಸ್. ಪಲ್ಲೇದ ಉಪಸ್ಥಿತರಿದ್ದರು.

ಶಿಬಿರದಲ್ಲಿ ವಿದ್ಯಾರ್ಥಿಗಳು ಬಸವಣ್ಣನವರ ಜೀವನಚರಿತ್ರೆ, ವಚನಗಳು ಹಾಗೂ ಭಕ್ತಿಗೀತೆಗಳನ್ನು ಪ್ರಸ್ತುತಪಡಿಸಿದರು.

### ಕೆಲಸದ ಸ್ಥಳದಲ್ಲಿ ಮಹಿಳೆಯರ ಸುರಕ್ಷತೆ, ಸೌಹಾರ್ದ ವಾತಾವರಣ ಕಡ್ಡಾಯ-ಸಿ.ಎಸ್. ಶಿವನಗೌಡರ

# ಲಿಂಗ ತಾರತಮ್ಯ-ವರದಕ್ಷಿಣೆ ವಿರುದ್ಧ ಜಾಗೃತಿ ಅಗತ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆ ಹಾಗೂ ವರದಕ್ಷಿಣೆ ಪದ್ಧತಿಯ ನಿರ್ಮೂಲನೆಗಾಗಿ ಎಲ್ಲರೂ ಕೈಜೋಡಿಸಬೇಕೆಂದು ದಿವಾಣಿ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡರ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ "ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ-2013" ಹಾಗೂ ವರದಕ್ಷಿಣೆ ನಿಷೇಧ ಕಾಯ್ದೆ ಕುರಿತು ಆಯೋಜಿಸಿದ್ದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆಲಸದ ಸ್ಥಳದಲ್ಲಿ ಮಹಿಳೆಯರು ಜಾಗೃತರಾಗಿರಬೇಕು. ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮಹಿಳೆಯರೊಂದಿಗೆ ಗೌರವಯುತವಾಗಿ ನಡೆದುಕೊಳ್ಳಬೇಕು. ಬಡ್ತಿ ಅಥವಾ ಇತರ ಆಮಿಷಗಳನ್ನು ಒಡ್ಡಿ ಮಹಿಳೆಯರನ್ನು ದುರುಪಯೋಗಪಡಿಸಿಕೊಳ್ಳುವುದು ಕಾನೂನಿನ ಅಡಿಯಲ್ಲಿ ಗಂಭೀರ ಅಪರಾಧ ಎಂದು ಎಚ್ಚರಿಸಿದರು. ಯಾವುದೇ ತಪ್ಪು ಮಾಡದಿದ್ದರೆ ಮಹಿಳೆಯರು ಭಯಪಡುವ ಅಗತ್ಯವಿಲ್ಲ ಎಂದು ಧೈರ್ಯ ತುಂಬಿದರು.

ತಾಲೂಕು ಹಾಗೂ ಗ್ರಾಮ ಮಟ್ಟದ ಕಚೇರಿಗಳಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸುವ ಅಗತ್ಯವಿದೆ. ವೈಯಕ್ತಿಕ ಕಾರಣಗಳಿಂದ ಸುಳ್ಳು ದೂರು ನೀಡುವುದು ಸರಿಯಲ್ಲ, ಅದು ಸಾಬೀತಾದಲ್ಲಿ ದೂರುದಾರರ ಮೇಲೆಯೂ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸ್ಪಷ್ಟಪಡಿಸಿದರು. ಕಚೇರಿಗಳಲ್ಲಿ ಶಿಸ್ತಿನ ವಾತಾವರಣ ಕಾಪಾಡುವುದು ಮುಖ್ಯವಾಗಿದ್ದು, ಹಿರಿಯ ಅಧಿಕಾರಿಗಳ ಸೂಚನೆಗಳನ್ನು ದೌರ್ಜನ್ಯ ಎಂದು ತಪ್ಪಾಗಿ ಅರ್ಥೈಸಬಾರದು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಲಿಂಗ ತಾರತಮ್ಯ ಹಾಗೂ ಹೆಣ್ಣುಮಕ್ಕಳ ಮೇಲಿನ ಶೋಷಣೆಯನ್ನು ತಡೆಯಲು ಸ್ಥಳೀಯ ಮತ್ತು ಜಿಲ್ಲಾ ಮಟ್ಟದ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಹದಿಹರೆಯದ ಮಕ್ಕಳ ರಕ್ಷಣೆ ಸಮಾಜದ ಜವಾಬ್ದಾರಿಯಾಗಿದ್ದು, ಕಾನೂನುಗಳ ಬಗ್ಗೆ ಅರಿವು ಮೂಡಿಸುವ ಮೂಲಕ ದೌರ್ಜನ್ಯಗಳನ್ನು ತಡೆಗಟ್ಟಬಹುದು ಎಂದರು. ಗ್ರಾಮೀಣ ಭಾಗಗಳಲ್ಲಿ ವರದಕ್ಷಿಣೆ ಪಿಡುಗು ಇನ್ನೂ ಮುಂದುವರಿದಿರುವುದನ್ನು ಉಲ್ಲೇಖಿಸಿ, ಜನರ ಮನೋಭಾವದಲ್ಲಿ ಬದಲಾವಣೆ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.



> "ವರದಕ್ಷಿಣೆ ಎಂಬ ಸಾಮಾಜಿಕ ಪಿಡುಗನ್ನು ಹೋಗಲಾಡಿಸುವುದು ನಮ್ಮ ಕರ್ತವ್ಯವಾಗಿದೆ. ವರದಕ್ಷಿಣೆ ನೀಡುವುದು ಹಾಗೂ ಪಡೆಯುವುದು ಎರಡೂ ಅಪರಾಧವಾಗಿದ್ದು, ಈ ಪಿಡುಗನ್ನು ಬೇರುಸಹಿತ ನಿರ್ಮೂಲನೆ ಮಾಡಲು ಪ್ರತಿಯೊಬ್ಬರೂ ಕೈಜೋಡಿಸಬೇಕು. ಸಾರ್ವಜನಿಕ ಸಂಪರ್ಕದಲ್ಲಿರುವ ಇಲಾಖೆಗಳ ಸಿಬ್ಬಂದಿಗಳು ಜನಸಾಮಾನ್ಯರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು."
>
> **- ಸಿ.ಎಸ್. ಶಿವನಗೌಡರ,**
> ದಿವಾಣಿ ನ್ಯಾಯಾಧೀಶರು

ಜಿಲ್ಲೆಯಲ್ಲಿ ಲಿಂಗ ತಾರತಮ್ಯ ಮತ್ತು ದೌರ್ಜನ್ಯ ತಡೆಗೆ ಆಂತರಿಕ ಹಾಗೂ ಸ್ಥಳೀಯ ಸಮಿತಿಗಳ ಪಾತ್ರ ಮಹತ್ವದ್ದಾಗಿದೆ. ಒಟ್ಟು 839 ಸಮಿತಿಗಳ ರಚನೆ ಗುರಿಯಾಗಿದ್ದು, ಈಗಾಗಲೇ 731 ಸಮಿತಿಗಳು ಕಾರ್ಯನಿರ್ವಹಿಸುತ್ತಿವೆ. ಉಳಿದ ಸಮಿತಿಗಳನ್ನು ಶೀಘ್ರದಲ್ಲೇ ರಚಿಸಿ ಸಕ್ರಿಯಗೊಳಿಸಲಾಗುವುದು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ UNICEF ಮಕ್ಕಳ ಸಂರಕ್ಷಣಾ ಘಟಕದ ಪ್ರಾದೇಶಿಕ ಸಂಯೋಜಕರಾದ ಹರೀಶ್ ಜೋಗಿ, ಡಿ.ವೈ.ಎಸ್.ಪಿ ಮಹಾಂತೇಶ ಸಜ್ಜನ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಾಯಕ ಕಾನೂನು ನೆರವು ಅಭಿಕ್ಷಕರಾದ ಶ್ರೀಮತಿ ಮಂಜುಳಾ ಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿಗಳಾದ ಶ್ರೀಮತಿ ರಾಧಾ ಜಿ. ಮಣ್ಣೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮತಿ ಜಯಶ್ರೀ ಆರ್. ಸ್ವಾಗತಿಸಿದರು. ಸುವರ್ಣ ಪತ್ತಾರ ಪ್ರಾರ್ಥನಾ ಗೀತೆ ಹಾಡಿದರು. ವಿಜಯಲಕ್ಷ್ಮಿ ಗುರುಬಸವನಗೌಡರ ಕಾರ್ಯಕ್ರಮ ನಿರೂಪಿಸಿದರು.

## ನರೇಗಲ್ ಸರ್ಕಾರಿ ಕಾಲೇಜಿನ 79 ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್**

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಅಂತಿಮ ವರ್ಷದ ಬಿಎ, ಬಿಕಾಂ, ಬಿಎಸ್‌ಸಿ ಹಾಗೂ ಬಿಸಿಎ ವಿದ್ಯಾರ್ಥಿಗಳಿಗೆ ಉದ್ಯೋಗ ಅವಕಾಶ ದೊರೆತಿದೆ.

ಕಾಲೇಜಿನಲ್ಲಿ ನಡೆದ ಕ್ಯಾಂಪಸ್ ಸೆಲೆಕ್ಷನ್‌ನಲ್ಲಿ ಒಟ್ಟು 79 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ. ಬೆಂಗಳೂರಿನ ಕ್ರಿಯೇಟಿವ್ ಇಂಜಿನಿಯರ್ಸ್ ಸಂಸ್ಥೆ ಹಾಗೂ ಟಾಟಾ ಎಲೆಕ್ಟ್ರಾನಿಕ್ಸ್ ಸಿಸ್ಟಮ್ಸ್ ಸಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರು ನಡೆಸಿದ ಸಂದರ್ಶನದಲ್ಲಿ ವಿದ್ಯಾರ್ಥಿಗಳು ಯಶಸ್ವಿಯಾಗಿ ಆಯ್ಕೆಯಾಗಿದ್ದಾರೆ.



ಆಯ್ಕೆಯಾದ ವಿದ್ಯಾರ್ಥಿಗಳಿಗೆ ತಿಂಗಳಿಗೆ ರೂ. 21,407 ವೇತನದ ಜೊತೆಗೆ ವಾರ್ಷಿಕ ರೂ. 2.14 ಲಕ್ಷದ ಆಫರ್ ಲೆಟರ್ ನೀಡಲಾಗಿದೆ. ಗ್ರಾಮೀಣ ಭಾಗದ ಸರ್ಕಾರಿ ಕಾಲೇಜಿನಿಂದ ಇಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಉದ್ಯೋಗ ಪಡೆಯುವುದು ವಿಶೇಷ ಸಾಧನೆಯಾಗಿದೆ ಎಂದು ಕಾಲೇಜು ಆಡಳಿತ ತಿಳಿಸಿದೆ.

ಈ ಕುರಿತು ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಪ್ರಾಂಶುಪಾಲ ಎಸ್.ಎಲ್. ಗಳೇದಗುಡ್ಡ ಅವರು, ಉಪನ್ಯಾಸಕರ ನಿರಂತರ ಪರಿಶ್ರಮ ಮತ್ತು ಉದ್ಯೋಗ ಘಟಕದ ಮಾರ್ಗದರ್ಶನದಿಂದ ಈ ಯಶಸ್ಸು ಸಾಧ್ಯವಾಗಿದೆ ಎಂದು ಹೇಳಿದರು.

ಹಿರಿಯ ಪ್ರಾಧ್ಯಾಪಕಿ ಜಯಶ್ರೀ ಮುತಗಾರ ಮಾತನಾಡಿ, ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳು ಸರಿಯಾದ ಮಾರ್ಗದರ್ಶನ ದೊರೆತಾಗ ಉತ್ತಮ ಸಾಧನೆ ಮಾಡುತ್ತಾರೆ ಎಂಬುದಕ್ಕೆ ಇದು ಉದಾಹರಣೆ ಎಂದರು.

ಬಿಸಿಎ ವಿಭಾಗದ ಎಚ್‌ಒಡಿ ಶಶಿಕಲಾ ವಿ.ಎಸ್. ಮಾತನಾಡಿ, ಕೌಶಲ್ಯ ಆಧಾರಿತ ತರಬೇತಿ ಹಾಗೂ ತಾಂತ್ರಿಕ ಶಿಕ್ಷಣದ ಫಲವಾಗಿ ವಿದ್ಯಾರ್ಥಿಗಳು ಉದ್ಯೋಗಕ್ಕೆ ಸಿದ್ಧರಾಗಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## ರಸ್ತೆ ಅಭಿವೃದ್ಧಿಗೆ ಆಗ್ರಹಿಸಿ ಪುರಸಭೆಗೆ ಮನವಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ 14ನೇ ವಾರ್ಡಿನ ಪರ್ವತ ಮಲ್ಲಯ್ಯ ದೇವಸ್ಥಾನದಿಂದ ಹಳೆಯ ಬಸ್ ನಿಲ್ದಾಣದವರೆಗೆ ರಸ್ತೆ ಅಭಿವೃದ್ಧಿಪಡಿಸುವಂತೆ ಆಗ್ರಹಿಸಿ ವಾರ್ಡಿನ ನಾಗರಿಕರು ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರಿಗೆ ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ, ಸುಮಾರು 10ರಿಂದ 12 ವರ್ಷಗಳ ಹಿಂದೆ ಸೋಮೇಶ್ವರ ಪಾದಗಟ್ಟಿಯಿಂದ ಹಳೆಯ ಬಸ್ ನಿಲ್ದಾಣದವರೆಗೆ ರಸ್ತೆ ಅಗಲೀಕರಣ ಮಾಡಲಾಗಿದ್ದರೂ, ಸಂಪೂರ್ಣ ರಸ್ತೆ ಅಭಿವೃದ್ಧಿ ಕಾರ್ಯ ನಡೆಯದೆ ಉಳಿದಿದೆ ಎಂದು ತಿಳಿಸಿದ್ದಾರೆ. ರಸ್ತೆ ಅಭಿವೃದ್ಧಿಗಾಗಿ ಹಲವಾರು ಬಾರಿ ಮನವಿ, ಪ್ರತಿಭಟನೆಗಳನ್ನು ನಡೆಸಿದರೂ, ಮುಖ್ಯ ಬಜಾರ್ ರಸ್ತೆಯ ಪಾದಗಟ್ಟಿಯಿಂದ ಪರ್ವತ ಮಲ್ಲಯ್ಯ ದೇವಸ್ಥಾನವರೆಗೆ ಮಾತ್ರ ಕಾಮಗಾರಿ ಪೂರ್ಣಗೊಂಡಿದೆ ಎಂದು ಆರೋಪಿಸಿದರು.

ಉಳಿದ ಭಾಗದ ರಸ್ತೆ ಹದಗೆಟ್ಟು ತಗ್ಗು-ಗುಂಡಿಗಳಿಂದ ಕೂಡಿದ್ದು, ಬೇಸಿಗೆಯಲ್ಲಿ ಧೂಳು ಹಾಗೂ ಮಳೆಗಾಲದಲ್ಲಿ ಕೆಸರಿನಿಂದ ಸಾರ್ವಜನಿಕರು, ರಸ್ತೆ ಬದಿಯ ನಿವಾಸಿಗಳು ಮತ್ತು ವ್ಯಾಪಾರಸ್ಥರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಮಲ್ಲಯ್ಯ ದೇವಸ್ಥಾನದಿಂದ ಹಳೆಯ ಬಸ್ ನಿಲ್ದಾಣ ಹಾಗೂ ಪೇಟೆ ಆಂಜನೇಯ ದೇವಸ್ಥಾನದಿಂದ ಮಾನ್ವಿ ಬ್ಯಾಂಕ್‌ವರೆಗೆ ರಸ್ತೆಗಳನ್ನು ಮಳೆಗಾಲದೊಳಗಾಗಿ ಅಭಿವೃದ್ಧಿಪಡಿಸದಿದ್ದರೆ ಸಾರ್ವಜನಿಕರು ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಎಸ್.ಜೆ. ಪುರಾಣಿಕಮಠ, ವಾಗೀಶ ಪುರಾಣಿಕಮಠ, ಕೊಟ್ರೇಶ ಕತ್ತಿ, ಮಂಜುನಾಥ ಗಾಂಜಿ, ಶಿವಾನಂದ ಮೆಕ್ಕಿ, ವಾಸು ಗೋಸಾವಿ, ಗಣೇಶ ಬೆಳವಗಿ, ಶ್ರೇಯಾಂಕ ಹಿರೇಮಠ, ಅಮರೇಶ ಗಾಂಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕ್ರಾಂತಿಗೀತೆ ಸ್ಪರ್ಧೆಯಲ್ಲಿ ರಂಜಿತಾ ಕಡಿಯವರಗೆ ಪ್ರಥಮ ಸ್ಥಾನ



**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ವಿಭಾಗದಿಂದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಆಯೋಜಿಸಿದ್ದ ಅಂತರಾಷ್ಟ್ರೀಯ ಮಟ್ಟದ ಸಮ್ಮೇಳನ ಹಾಗೂ ವಿದ್ಯಾರ್ಥಿಗಳ ಸಮ್ಮೇಳನದಲ್ಲಿ ನಡೆದ ಕ್ರಾಂತಿಗೀತೆ ಸ್ಪರ್ಧೆಯಲ್ಲಿ ರಂಜಿತಾ ಕಡಿಯವರ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ 4ನೇ ಸೆಮಿಸ್ಟರ್ ವಿದ್ಯಾರ್ಥಿನಿಯಾಗಿರುವ ರಂಜಿತಾ, ಈ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿದ್ದು, ರೂ. 3,000 ನಗದು ಬಹುಮಾನಕ್ಕೆ ಪಾತ್ರಳಾಗಿದ್ದಾರೆ.

ರಂಜಿತಾ ಎನ್‌ಎಸ್‌ಎಸ್ ಘಟಕದ ಆದರ್ಶ ಸ್ವಯಂಸೇವಕಿಯಾಗಿದ್ದು, ಅವರ ಈ ಸಾಧನೆಯನ್ನು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಪ್ರಾಂಶುಪಾಲರು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## ಶ್ರೀ ಬಾಲಾಜಿ ದೇವಸ್ಥಾನದ ವಾರ್ಷಿಕೋತ್ಸವ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಸುಮಾರು 91 ವರ್ಷಗಳ ಹಿಂದೆ ಬೆಟಗೇರಿ ರಜಪೂತ ಗಲ್ಲಿಯಲ್ಲಿ ನಿರ್ಮಾಣಗೊಂಡಿದ್ದ ಶ್ರೀ ಬಾಲಾಜಿ ದೇವಸ್ಥಾನವು ಸಮಾಜ ಬಾಂಧವರ ಹಾಗೂ ಸದ್ಭಕ್ತರ ಸಹಕಾರದಿಂದ 1987ರಲ್ಲಿ ನವೀಕರಣಗೊಂಡು ಮೂರ್ತಿ ಪ್ರತಿಷ್ಠಾಪನೆಯಾಯಿತು.

ಈ ದೇವಸ್ಥಾನದ ವಾರ್ಷಿಕೋತ್ಸವ ಕಾರ್ಯಕ್ರಮವು ದಿನಾಂಕ 28ರಂದು ಭಕ್ತಿಭಾವದಿಂದ ನೆರವೇರಿತು. ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯ ರಜಪೂತ ಸಮಾಜದ ಮಹಿಳಾ ಮಂಡಳಿಯವರು ಶ್ರೀಮತಿ ಶೋಭಾ ಕಿಲ್ಲೇದಾರ ಅವರ ನೇತೃತ್ವದಲ್ಲಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ವಿದ್ಯಾ ರಜಪೂತ, ಲತಾ ರಜಪೂತ, ಉಮಾ ಎಸ್., ಸರೋಜನಿ ಕಡೆಮನಿ, ನಾಗವತಿ ರಜಪೂತ, ಸುರೇಖಾ ಬಿ., ಕಲ್ಪನಾ ಶಿವಾನಂದ, ಸುಧಾ ಹೋಳಿಯನ್ನವರ, ಕಸ್ತೂರಿ, ಗೀತಾ ಧೋಂಡಗೆ, ವಿಜಯಾ ಬಧಿ, ರೇಖಾ ಬಧಿ ಸೇರಿದಂತೆ ಅನೇಕ ಸದ್ಭಕ್ತರು ಪಾಲ್ಗೊಂಡಿದ್ದರು.



## ಜೀವ-ಜಲವನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ಭೂಮಿ ದಿನಾಚರಣೆಯ ಅಂಗವಾಗಿ ನಗರದ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ 'ಮಣ್ಣು ರಕ್ಷಿಸಿ' ಭವ್ಯ ಜಾಗೃತಿ ರ್‍ಯಾಲಿಯನ್ನು ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಸಂಘಟಿಸಲಾಯಿತು.




ಈ ಪ್ರಯುಕ್ತ ನಡೆದ ಪೂರ್ವಭಾವಿ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನಿರ್ದೇಶಕ ಪ್ರೊ. ರೋಹಿತ್ ಒಡೆಯರ ಅವರು ಮಣ್ಣು, ನೀರು ಹಾಗೂ ನಿಸರ್ಗ ಸಂರಕ್ಷಣೆಯ ಅಗತ್ಯತೆ ಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದರು.

ಮಣ್ಣಿನ ಫಲವತ್ತತೆ ಕುಸಿತ, ಅರಣ್ಯ ನಾಶ, ಜಲ ಕೊರತೆ ಮತ್ತು ಪರಿಸರ ವೈಪರೀತ್ಯಗಳ ಬಗ್ಗೆ ವಿಡಿಯೋಗಳ ಮೂಲಕ ಉದಾಹರಣೆ ನೀಡಿ ಜಾಗೃತಿ ಮೂಡಿಸಿದರು. ಮಾನವನು ಐಶಾರಾಮಿ ಜೀವನದ ಹಂಬಲದಲ್ಲಿ ಪ್ರಕೃತಿಯನ್ನು ದುರುಪಯೋಗಪಡಿಸಿಕೊಂಡ ಪರಿಣಾಮ ಅನೇಕ ಸಮಸ್ಯೆಗಳು ಉಂಟಾಗಿವೆ. ಆದ್ದರಿಂದ ಮಣ್ಣು, ಜಲ, ಜೀವಜಾಲವನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಅವರು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪುನಿತ್ ದೇಶಪಾಂಡೆ ಮಾತನಾಡಿ, ಪರಿಸರ ಸಂರಕ್ಷಣೆಯಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದು ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ ಮಾತನಾಡಿ, ಪ್ರಕೃತಿ ಸಂಪನ್ಮೂಲಗಳ ಸಂರಕ್ಷಣೆಯಲ್ಲಿ ನಿರ್ಲಕ್ಷ್ಯ ತೋರಿದರೆ ಮಹಾನಾಶ ಅನಿವಾರ್ಯ ಎಂದು ಎಚ್ಚರಿಸಿದರು. "ಇಲ್ಲಿಯವರೆಗೆ ನೀನು ಮಣ್ಣನ್ನು ತುಳಿದಿದ್ದೆ, ಮುಂದಿನ ದಿನಗಳಲ್ಲಿ ಮಣ್ಣೇ ನಿನ್ನನ್ನು ತುಳಿಯಬಹುದು" ಎಂಬ ಎಚ್ಚರಿಕೆಯ ಮಾತುಗಳಿಂದ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರುಗಳಾದ ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನಿರುದ್ಯೋಗಿ ಯುವಕರಿಗೆ ಉಚಿತ ವೃತ್ತಿ ತರಬೇತಿ ಆರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

SBI-ASF RSETI Hulakoti ವತಿಯಿಂದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ-ಯುವತಿಯರಿಗೆ ಏಪ್ರಿಲ್ ಮತ್ತು ಮೇ 2026 ತಿಂಗಳಲ್ಲಿ ವಿವಿಧ ಉಚಿತ ವೃತ್ತಿ ತರಬೇತಿಗಳು ಆರಂಭವಾಗುತ್ತಿವೆ.

ಈ ತರಬೇತಿಗಳಲ್ಲಿ ಕುರಿ ಸಾಕಾಣಿಕೆ ತರಬೇತಿ, ಮಹಿಳೆಯರ ಸೌಂದರ್ಯ ಸೇವಾ ಕೇಂದ್ರ ತರಬೇತಿ, ಮೊಬೈಲ್ ದುರಸ್ತಿ ತರಬೇತಿ ಹಾಗೂ ಕಸೂತಿ (ಆರಿ ವರ್ಕ್) ತರಬೇತಿಗಳನ್ನು ನೀಡಲಾಗುತ್ತದೆ.

18ರಿಂದ 44 ವರ್ಷ ವಯಸ್ಸಿನ ಗ್ರಾಮೀಣ ಪ್ರದೇಶದ ಬಿ.ಪಿ.ಎಲ್, ಆದ್ಯತಾ ಕುಟುಂಬ, ಪಿ.ಎಚ್.ಎಚ್ ಅಥವಾ ನರೇಗಾ ಉದ್ಯೋಗ ಖಾತ್ರಿ ಕಾರ್ಡ್ ಹೊಂದಿರುವ ಗಂಡು ಹಾಗೂ ಹೆಣ್ಣು ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ತರಬೇತಿಯಲ್ಲಿ ಭಾಗವಹಿಸುವವರಿಗೆ ಉಚಿತ ಊಟ ಹಾಗೂ ವಸತಿ ಸೌಲಭ್ಯ ಕಲ್ಪಿಸಲಾಗುತ್ತದೆ.

ತರಬೇತಿ ಪೂರ್ಣಗೊಳಿಸಿದವರಿಗೆ ಕೇಂದ್ರ ಸರ್ಕಾರದಿಂದ ಪ್ರಮಾಣಪತ್ರ ನೀಡಲಾಗುವುದರ ಜೊತೆಗೆ ಬ್ಯಾಂಕ್ ಸಾಲ ಸೌಲಭ್ಯಕ್ಕೂ ಸಹಾಯ ಮಾಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಆಸಕ್ತರು 9632287949 ಅಥವಾ 8880169996 ಸಂಖ್ಯೆಗೆ ಸಂಪರ್ಕಿಸಬಹುದು. ಕಚೇರಿ RSETI Hulakoti campus ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಕುರಿತು ಎಸ್‌ಬಿಐ ಬ್ಯಾಂಕ್ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಲಸದ ಒತ್ತಡ ಹೆಚ್ಚಾಗಿ ಆತ್ಮಹತ್ಯೆ ಮಾಡಿಕೊಂಡ್ರಾ ಪಿಡಿಒ?

▸▸ ಮೊದಲನೇ ಪುಟದಿಂದ

ಒಂದೇ ಗ್ರಾಮ ಪಂಚಾಯತಿಯಲ್ಲಿ ಕೆಲಸ ಮಾಡಲು ಅವಕಾಶ ಸಿಗಬಹುದು ಎಂದು ತಾಪಂ ಇಒ ತಿಳಿಸಿದ್ದಾರೆ ಎಂದು ನನಗೆ ಹೇಳಿದ್ದರು. ಬೆಂಗಳೂರಿಗೆ ಹೋಗುವ ವಿಚಾರವನ್ನೂ ಚರ್ಚಿಸಿದ್ದರು. ಮಂಗಳವಾರ ರಾತ್ರಿ ಮಾತನಾಡಿ 'ಸುಸ್ತಾಗಿದ್ದೇನೆ, ಮತ್ತೆ ಕರೆ ಮಾಡಬೇಡಿ' ಎಂದಿದ್ದರು. ನಂತರ ಕರೆ ಮಾಡಿದರೂ ಸ್ವೀಕರಿಸಲಿಲ್ಲ. ಮನೆಯ ಮಾಲೀಕರಿಗೆ ತಿಳಿಸಿದಾಗ ಘಟನೆ ಗೊತ್ತಾಯಿತು" ಎಂದು ತಿಳಿಸಿದ್ದಾರೆ.

ಈ ಸಂಬಂಧ ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka